ವಿಜಯಪುರ | ಸಂಪುಟ 04 | ಸಂಚಿಕೆ 127 | ಪುಟ 04 | ₹ 3.00

https://udayarashminews.com

udayarashmi 90088 88340

# ಉದಯ ರಶ್ಮಿ

Udayarashmi Kannada Daily

ಜನಪರ-ಜೀವಪರ

ಕನ್ನಡ ದಿನಪತ್ರಿಕೆ

ಸಂಪಾದಕ : ಇಂದುಶೇಖರ ಮಣೂರ

Editor: Indushekhar Manur

editor.udayarashmi@gmail.com RNI NO: KARKAN/2023/86203 ಗುರುವಾರ, ಜುಲೈ, 09, 2026

"ಬೆಂಗಳೂರಿನಾಚೆಗೆ ಮತ್ತಷ್ಟು ಬೆಂಗಳೂರುಗಳನ್ನು ನಿರ್ಮಿಸಲು ನಮ್ಮ ಸರ್ಕಾರ ಮುಂದಾಗಿದೆ. ಬೆಂಗಳೂರಿನಲ್ಲಿರುವ ಎಲ್ಲಾ ಸೌಕರ್ಯಗಳನ್ನು ರಾಜ್ಯದ ಎರಡು ಹಾಗೂ ಮೂರನೇ ಹಂತದ ನಗರಗಳಿಗೂ ಒದಗಿಸಲು ಬದ್ಧರಾಗಿದ್ದೇವೆ."



■ ಡಿ ಕೆ ಶಿವಕುಮಾರ್
ಮುಖ್ಯಮಂತ್ರಿ

# ರೂ. 1.12 ಕೋಟಿ ಮೌಲ್ಯದ 427 ಕೆಜಿ ಮಾದಕ ವಸ್ತು ನಾಶ

■ ಉದಯರಶ್ಮಿ ದಿನಪತ್ರಿಕೆ



**ಉತ್ತರ ವಲಯದಲ್ಲಿ ಜೂನ್ 21ರಿಂದ 28 ರವರೆಗೆ ಡ್ರಗ್ ಜಾಗೃತಿ ವಾರ | 16 ಪ್ರಕರಣ ದಾಖಲು**

ವಿಜಯಪುರ: ಅಂತರರಾಷ್ಟ್ರೀಯ ಮಾದಕ ದ್ರವ್ಯ ದುರುಪಯೋಗ ಮತ್ತು ಅಕ್ರಮ ಸಾಗಣೆ ನಿಗ್ರಹ ದಿನದ ಅಂಗವಾಗಿ ಜೂನ್ 21ರಿಂದ 28ರವರೆಗೆ ಉತ್ತರ ವಲಯದಲ್ಲಿ "ಡ್ರಗ್ ಅವೇರ್‌ನೆಸ್ ವೀಕ್" ಆಚ-ರಿಸಲಾಗಿದ್ದು, ವಿಶೇಷ ಕಾರ್ಯಾಚರಣೆ ಹಾಗೂ ಜಾಗೃತಿ ಕಾರ್ಯಕ್ರಮಗಳನ್ನು ಹಮ್ಮಿಕೊಳ್ಳಲಾಗಿದೆ.

ಬೆಳಗಾವಿ, ವಿಜಯಪುರ, ಬಾಗಲಕೋಟೆ, ಧಾರವಾಡ ಹಾಗೂ ಗದಗ ಜಿಲ್ಲೆಗಳಲ್ಲಿ ಮಾದಕ ವಸ್ತುಗಳ ದುಷ್ಪರಿಣಾಮಗಳ ಕುರಿತು ವ್ಯಾಪಕ ಜಾಗೃತಿ ಮೂಡಿಸುವ ಜೊತೆಗೆ, ಎನ್‌ಡಿಪಿಎಸ್ ಕಾಯ್ದೆಯಡಿ ವಿಶೇಷ ದಾಳಿ ನಡೆಸಿ ಕಾನೂನು ಕ್ರಮ ಕೈಗೊಳ್ಳಲಾಗಿದೆ.

ಕಾರ್ಯಾಚರಣೆಯ ಭಾಗವಾಗಿ, ಎನ್‌ಡಿಪಿ-ಎಸ್ ಕಾಯ್ದೆಯಡಿ ವಶಪಡಿಸಿಕೊಂಡಿದ್ದ 427 ಕೆಜಿ 29 ಗ್ರಾಂ ತೂಕದ, ರೂ. 1,12,49,510 ಮೌಲ್ಯದ ಮಾದಕ ವಸ್ತುಗಳನ್ನು ನಾಶಪಡಿಸಲಾಗಿದೆ.

ಜೂನ್ 21ರಿಂದ 28ರವರೆಗೆ ಒಟ್ಟು 16 ಎನ್‌ಡಿಪಿ-ಎಸ್ ಪ್ರಕರಣಗಳನ್ನು ದಾಖಲಿಸಿ, 26 ಕೆಜಿ 987 ಗ್ರಾಂ ತೂಕದ, ರೂ. 12,38,788 ಮೌಲ್ಯದ ಮಾದಕ ವಸ್ತುಗಳನ್ನು ವಶಪಡಿಸಿಕೊಳ್ಳಲಾಗಿದೆ.

ಇದೇ ವೇಳೆ, ಮೊದಲ ಬಾರಿಗೆ PITNDPS ಕಾಯ್ದೆ ಅಡಿಯಲ್ಲಿ ಮಾದಕ ವಸ್ತುಗಳ ಸಂಗ್ರಹಣೆ, ಮಾರಾಟ ಹಾಗೂ ಸಾಗಾಟದಲ್ಲಿ ರೂಢಿಗತ ಆರೋಪಿಗಳೆಂದು ಗುರುತಿಸಲಾದ ನಾಲ್ವರನ್ನು ಬಂಧಿಸಲಾಗಿದೆ. ಬಂಧಿತರನ್ನು ನಾಗರಾಜ ದೊಡ್ಡಪ್ಪ ಮುತ್ತಗಾರ (ಗದಗ), ದೀಪಕ ರಾವಸಾಹೇಬ ನಾಯಿಕ (ಬೆಳಗಾವಿ), ಪ್ರಭು @ ಪ್ರಭಾಕರ ಬಾಬುರಾವ ಲಾವಟಿ (ಆಲಮೇಲ, ವಿಜಯಪುರ) ಹಾಗೂ ಮನೋಹರ @ ಮೋಹನ ಯಲ್ಲಪ್ಪ ಚವ್ಹಾಣ @ ಹರಣಶಿಕಾರಿ (ವಿಜಯಪುರ) ಎಂದು ಗುರುತಿಸಲಾಗಿದೆ.

ಇದಲ್ಲದೆ, ಉತ್ತರ ವಲಯದ ಐದು ಜಿಲ್ಲೆಗಳ ಶಾಲೆ ಹಾಗೂ ಕಾಲೇಜುಗಳಲ್ಲಿ ವಿದ್ಯಾರ್ಥಿಗಳಿಗಾಗಿ 1,106 ಜಾಗೃತಿ ಕಾರ್ಯಕ್ರಮಗಳು ಹಾಗೂ 107 ಸಾರ್ವಜನಿಕ ಜಾಗೃತಿ ರ್‍ಯಾಲಿಗಳನ್ನು ಆಯೋಜಿಸಿ, ಮಾದಕ ವಸ್ತುಗಳ ದುಷ್ಪರಿಣಾಮಗಳ ಬಗ್ಗೆ ಅರಿವು ಮೂಡಿಸಲಾಗಿದೆ.

# ಶೇ.80ಕ್ಕೂ ಹೆಚ್ಚು ಎಸ್‌ಐಆರ್ ಫಾರಂ ವಿತರಣೆ

## ಕರ್ನಾಟಕ ಮುಖ್ಯ ಚುನಾವಣಾ ಅಧಿಕಾರಿ ವಿ ಅನ್ಬುಕುಮಾರ್ ಹೇಳಿಕೆ

ಬೆಂಗಳೂರು: ರಾಜ್ಯದಾದ್ಯಂತ ಶೇ.80.85ರಷ್ಟು ಎಣಿಕೆ ಫಾರಂಗಳನ್ನು ಈಗಾಗಲೇ ಮತದಾರರಿಗೆ ವಿತ-ರಿಸಲಾಗಿದೆ ಎಂದು ಕರ್ನಾಟಕ ಮುಖ್ಯ ಚುನಾವಣಾ ಅಧಿಕಾರಿ ವಿ ಅನ್ಬುಕುಮಾರ್ ಹೇಳಿದ್ದಾರೆ.

ಚುನಾವಣಾ ಆಯೋಗದ ನಿರ್ದೇಶನದಂತೆ, ಮತದಾರರ ಪಟ್ಟಿಯ ಎಸ್‌ಐಆರ್ ಅಡಿಯಲ್ಲಿ ಮನೆ-ಮನೆಗೆ ತೆರಳಿ ಎಣಿಕೆ ಕಾರ್ಯ ಜೂನ್ 30ರಂದು ಪ್ರಾರಂಭವಾಗಿದ್ದು ಜುಲೈ 29ರವರೆಗೆ ಮುಂದುವ-ರಿಯುತ್ತದೆ ಎಂದರು.

ಬುಧವಾರ ಪತ್ರಿಕಾಗೋಷ್ಠಿಯನ್ನುದ್ದೇಶಿಸಿ ಮಾತನಾಡಿದ ಅನ್ಬುಕುಮಾರ್, ನಾವು ಕರ್ನಾಟಕದ ಪ್ರತಿಯೊಂದು ಮನೆಗೆ, ಪ್ರತಿಯೊಬ್ಬ ಮತದಾರರಿಗೆ ಎಣಿಕೆ ಫಾರಂಗಳನ್ನು ವಿತರಿಸುತ್ತೇವೆ. ಆ ಪ್ರಕ್ರಿಯೆಯಲ್ಲಿ ಶೇ.80.85ರಷ್ಟು ಎಣಿಕೆ ಫಾರಂಗಳನ್ನು ಈಗಾಗಲೇ ಕರ್ನಾಟಕದ ಮತದಾರರಿಗೆ ವಿತರಿಸಲಾಗಿದೆ ಎಂದರು. 224 ವಿಧಾನಸಭಾ ಕ್ಷೇತ್ರಗಳ ಪೈಕಿ 112 ಕ್ಷೇತ್ರಗಳಲ್ಲಿ ಶೇಕಡ 90ಕ್ಕೂ ಹೆಚ್ಚು ಫಾರ್ಮ್‌ಗಳನ್ನು ವಿತ-




ರಿಸಲಾಗಿದೆ. ಆದರೆ 169 ಕ್ಷೇತ್ರಗಳಲ್ಲಿ ಶೇಕಡ 80ಕ್ಕೂ ಹೆಚ್ಚು ಫಾರ್ಮ್‌ಗಳನ್ನು ಈಗಾಗಲೇ ವಿತರಿಸಲಾಗಿದೆ ಎಂದರು.

ಗಣತಿ ಫಾರಂಗಳನ್ನು ಮತದಾರರಿಗೆ ಸಕಾಲದಲ್ಲಿ ತಲುಪುವಂತೆ ನೋಡಿಕೊಳ್ಳಲು ಸಂಬಂಧಪಟ್ಟ ಎಲ್ಲಾ ಜಿಲ್ಲಾ ಚುನಾವಣಾ ಅಧಿಕಾರಿಗಳಿಗೆ ಈಗಾಗಲೇ ನಿರ್ದೇಶನಗಳನ್ನು ನೀಡಲಾಗಿದೆ ಎಂದರು.

**ಬಿಎಲ್‌ಒಗಳು ಪ್ರತಿ ಮನೆಗೆ ಭೇಟಿ ನೀಡಿ ಫಾರ್ಮ್ ವಿತರಿಸಬೇಕು**

ಮನೆ-ಮನೆಗೆ ಭೇಟಿ ನೀಡುವ ಬದಲು ಸಮುದಾಯ ಭವನಗಳಲ್ಲಿ ಫಾರ್ಮ್‌ಗಳನ್ನು ವಿತರಿಸಲಾಗುತ್ತಿದೆ ಎಂಬ ವರದಿಗಳಾಗಿದ್ದು ಎಸ್‌ಐಆರ್ ಪ್ರಕ್ರಿಯೆಯಲ್ಲಿ ಅಕ್ರಮಗಳ ಆರೋಪಗಳ ನಡುವೆ, ಜುಲೈ 1 ರಂದು ಸ್ವೀಕರಿಸಿದ ಎಲ್ಲಾ ದೂರುಗಳನ್ನು ಪರಿಶೀಲಿಸಲಾಗಿದೆ. ಈಗಾಗಲೇ ಚುನಾವಣಾ ಆಯೋಗಕ್ಕೆ ವರದಿಯನ್ನು ಸಲ್ಲಿಸಲಾಗಿದೆ ಎಂದ ಅವರು, ಬಿಎಲ್‌ಒಗಳು ಪ್ರತಿ ಮನೆಗೆ ಭೇಟಿ ನೀಡುವ ಮೂಲಕ ಫಾರ್ಮ್‌ಗಳನ್ನು ವಿತರಿಸಬೇಕು. ಮನೆ-ಮನೆ ವಿತರಣೆಯನ್ನು ಮಾತ್ರ ಕೈಗೊಳ್ಳಲು ಅವರಿಗೆ ನಿರ್ದೇಶಿಸಲಾಗಿದೆ ಎಂದರು.

# ಮೃತ ಲಕ್ಷ್ಮಣರಾವ್ ಮನೆಗೆ ಶಾಸಕ ನಾಡಗೌಡ ಭೇಟಿ : ಸಾಂತ್ವನ

■ ಉದಯರಶ್ಮಿ ದಿನಪತ್ರಿಕೆ

ತಾಳಿಕೋಟೆ: ಪಟ್ಟಣದ ಪುರಸಭೆ ಮಾಜಿ ಅಧ್ಯಕ್ಷ, ಕಾಂಗ್ರೆಸ್ ಪಕ್ಷದ ಮುಖಂಡ ಲಕ್ಷ್ಮಣರಾವ್ ಮಹಿಂದ್ರಕರ ಅವರು ಇತ್ತೀಚಿಗೆ ನಿಧನರಾದ ಹಿನ್ನೆಲೆಯಲ್ಲಿ ಕೆ ಎಸ್ ಡಿ ಎಲ್ ಅಧ್ಯಕ್ಷ, ಶಾಸಕ ಸಿ.ಎಸ್.ನಾಡಗೌಡ ಅಪ್ಪಾಜಿ ಅವರು ಮಂಗಳವಾರ ಅವರ ಮನೆಗೆ ಭೇಟಿ ನೀಡಿ ಕುಟುಂಬದ ಸದಸ್ಯರಿಗೆ ಸಾಂತ್ವನ ಹೇಳಿದರು.

ಈ ಸಂದರ್ಭದಲ್ಲಿ ಶಾಸಕರು ದಿವಂಗತ ಲಕ್ಷ್ಮಣರಾವ್ ಮಹಿಂದ್ರಕರ ಅವರೊಂದಿಗಿನ ತಮ್ಮ ರಾಜಕೀಯ ಒಡನಾಟ, ಪಕ್ಷದ ಕುರಿತು ಅವರಿಗಿದ್ದ ನಿಷ್ಠೆ ಹಾಗೂ ಅವರಲ್ಲಿದ್ದ ಒಳ್ಳೆಯ ಮಾನವೀಯ ಗುಣಗಳನ್ನು ಮೆಲುಕು ಹಾಕಿದರು.



ಈ ಸಮಯದಲ್ಲಿ ಮೃತ ಲಕ್ಷ್ಮಣ ಮಹಿಂದ್ರಕರ ಅವರ ಸಹೋದರ ದಿಲೀಪ ಮಹಿಂದ್ರಕರ, ಎಸ್ ಎಂ ಮಹಿಂದ್ರಕರ, ವಿ.ಬಿ.ಲೋಕರೆ, ತುಳಸಿದಾಸ ಹಂಚಾಟೆ, ಮೋತಿಲಾಲ್ ಮಹಿಂದ್ರಕರ, ಕಿಟ್ಟು ಮಹಿಂದ್ರಕರ, ವಿಜಯ ಮಹಿಂದ್ರಕರ, ಸುರೇಶಧಣಿ ನಾಡಗೌಡ (ಬಿಂಜಲಬಾವಿ), ಸಿದ್ದನಗೌಡ ಪಾಟೀಲ(ನಾವದಗಿ), ಪ್ರಭುಗೌಡ ಮದರಕಲ್ಲ, ಸಂಗನಗೌಡ ಅಸ್ಕಿ, ಶ್ರೀಮತಿ ನೀಲಮ್ಮ ಪಾಟೀಲ ಹಾಗೂ ಕುಟುಂಬದ ಸದಸ್ಯರು ಇದ್ದರು.

# ಎಸ್‌ಐಆರ್: ಜಿಲ್ಲಾಧಿಕಾರಿ ಡಾ.ಆನಂದ ಕೆ. ದಿಢೀರ್ ಭೇಟಿ, ಪರಿಶೀಲನೆ

## ವಿಜಯಪುರ ನಗರ ಮತಕ್ಷೇತ್ರ: ಸಮಗ್ರ ಮತದಾರರ ಪಟ್ಟಿ ಪರಿಷ್ಕರಣೆ ಕಾರ್ಯ



■ ಉದಯರಶ್ಮಿ ದಿನಪತ್ರಿಕೆ

ವಿಜಯಪುರ: ಜಿಲ್ಲೆಯಲ್ಲಿ ಸಮಗ್ರ ಮತದಾರರ ಪಟ್ಟಿ ಪರಿಷ್ಕರಣಾ ಕಾರ್ಯವು ಅತ್ಯಂತ ಚುರುಕಿನಿಂದ ಸಾಗಿದ್ದು, ಜಿಲ್ಲಾ ಚುನಾವಣಾಧಿಕಾರಿಗಳೂ ಆಗಿರುವ ಜಿಲ್ಲಾಧಿಕಾರಿ ಡಾ. ಆನಂದ ಕೆ. ಅವರು ಬುಧವಾರ ವಿಜಯಪುರ ನಗರ ಮತಕ್ಷೇತ್ರದ ವ್ಯಾಪ್ತಿಯಲ್ಲಿ ದಿಢೀರ್ ಭೇಟಿ ನೀಡಿ ಪರಿಶೀಲನೆ ನಡೆಸಿದರು.

ಕಳೆದ ಜೂನ್ 29 ರಿಂದಲೇ ಜಿಲ್ಲೆಯಾದ್ಯಂತ ಮತದಾರರ ಪಟ್ಟಿ ಸಮಗ್ರ ಪರಿಷ್ಕರಣಾ ಕಾರ್ಯವು ಆರಂಭಗೊಂಡಿದೆ. ಈ ಹಿನ್ನೆಲೆಯಲ್ಲಿ ನಗರದ ಚುನಾವಣೆ ಭಾಗ ಸಂಖ್ಯೆ 2ರ ವ್ಯಾಪ್ತಿಯಲ್ಲಿ ನಡೆಯುತ್ತಿರುವ ಪರಿಷ್ಕರಣಾ ಕಾರ್ಯದ ಪ್ರಗತಿಯನ್ನು ಖುದ್ದಾಗಿ ವೀಕ್ಷಿಸಿದ ಜಿಲ್ಲಾಧಿಕಾ-ರಿಗಳು, ಇಡೀ ಪ್ರಕ್ರಿಯೆಯ ಮೇಲ್ವಿಚಾರಣೆ ನಡೆಸಿದರು. ಇದೇ ವೇಳೆ ಸ್ಥಳದಲ್ಲಿದ್ದ ನಿಯೋಜಿತ ಅಧಿಕಾರಿಗಳು ಹಾಗೂ ಸಿಬ್ಬಂದಿಯೊಂದಿಗೆ ಚರ್ಚಿಸಿದ ಅವರು, ಯಾವುದೇ ಲೋಪದೋಷಗಳಿಗೆ ಆಸ್ಪದ ನೀಡದಂತೆ ಅತ್ಯಂತ ನಿಖರವಾಗಿ ಕಾರ್ಯನಿರ್ವಹಿಸಲು ಅಗತ್ಯ ಸಲಹೆ-ಸೂಚನೆಗಳನ್ನು ನೀಡಿದರು.

ಈ ಪರಿಶೀಲನಾ ಕಾರ್ಯದ ಸಂದರ್ಭದಲ್ಲಿ ಮಹಾನಗರ ಪಾಲಿಕೆ ಆಯುಕ್ತರು ಹಾಗೂ ನೋಡಲ್ ಅಧಿಕಾರಿಯಾದ ವಿಜಯ ಮೆಕ್ಕಳಕಿ ಸೇರಿದಂತೆ ಚುನಾವಣಾ ಕಾರ್ಯಕ್ಕೆ ನಿಯೋಜನೆಗೊಂಡಿರುವ ವಿವಿಧ ಇಲಾಖೆಯ ಅಧಿಕಾರಿ, ಸಿಬ್ಬಂದಿಗಳು ಉಪಸ್ಥಿತರಿದ್ದರು.

# ಚತುಷ್ಪಥ ಮಾರ್ಗ ಅಭಿವೃದ್ಧಿ ಕುರಿತು ಸಂಸದ ಜಿಗಜಿಣಗಿ ಚರ್ಚೆ

■ ಉದಯರಶ್ಮಿ ದಿನಪತ್ರಿಕೆ

ವಿಜಯಪುರ: ವಿಜಯಪುರ, ಕಲಬುರ್ಗಿ, ವಿಜಯಪುರ – ಹುಬ್ಬಳ್ಳಿ ರಸ್ತೆಯನ್ನು ಚತುಷ್ಪಥ ಮಾರ್ಗವನ್ನಾಗಿ ಪರಿವರ್ತನೆ ಹಿನ್ನೆಲೆಯಲ್ಲಿ ಸಂಸದ ರಮೇಶ ಜಿಗಜಿಣಗಿ

ರಾಷ್ಟ್ರೀಯ ಹೆದ್ದಾರಿ ಅಭಿವೃದ್ಧಿ ಪ್ರಾಧಿಕಾರದ ಅಧಿಕಾರಿಗಳೊಂದಿಗೆ ಮಹತ್ವದ ಸಮಾಲೋಚನಾ ಸಭೆ ನಡೆಸಿದರು.

ವಿಜಯಪುರ ಮಹಾನಗರದಿಂದ ಕಲಬುರ್ಗಿ, ಹುಬ್ಬಳ್ಳಿ ಸೇರಿದಂತೆ ಅನೇಕ ಪ್ರಮುಖ ಮಹಾನಗರಗಳಿಗೆ ನಿತ್ಯ ಸಾವಿರಾರು ಜನರ ಓಡಾಟವಿದೆ, ಹೀಗಾಗಿ ಸಂಚಾರ ದಟ್ಟಣೆಯನ್ನು ನಿಯಂತ್ರಿಸಿ ವ್ಯವಸ್ಥಿತ ಸಂಚಾರಕ್ಕೆ ಅನುಕೂಲವಾಗಲು ವಿಜಯಪುರ- ಕಲಬುರ್ಗಿ, ವಿಜಯಪುರ –ಹುಬ್ಬಳ್ಳಿ ರಸ್ತೆ ಚತುಷ್ಪಥ ಮಾರ್ಗವಾಗಿ ಅಭಿವೃದ್ಧಿಗೊಳ್ಳಬೇಕಿದೆ ಎಂದು ಸಂಸದ ಜಿಗಜಿಣಗಿ ಹೇಳಿದರು.

**ಸಂಸದ ರಮೇಶ ಜಿಗಜಿಣಗಿ ರಾಷ್ಟ್ರೀಯ ಹೆದ್ದಾರಿ ಅಭಿವೃದ್ಧಿ ಪ್ರಾಧಿಕಾರದ ಅಧಿಕಾರಿಗಳೊಂದಿಗೆ ಸಮಾಲೋಚನಾ ಸಭೆ**



ಈ ಕಾಮಗಾರಿಗೆ ಸಂಬಂಧಿಸಿದಂತೆ ಪೂರಕ ಅಂದಾಜು, ಪ್ರಸ್ತಾವನೆ ಸೇರಿದಂತೆ ವಿವಿಧ ಅನುಷ್ಠಾನ ಸಂಬಂಧಿಸಿದ ಸಮಗ್ರ ವಿಷಯಗಳನ್ನು ಸಮಾಲೋಚನೆ ನಡೆಸಿ ಮಾಹಿತಿ ಪಡೆದುಕೊಂಡರು.

ವಿಜಯಪುರ ಸೇರಿದಂತೆ ವಿವಿಧ ಭಾಗದ ರಾಷ್ಟ್ರೀಯ ಹೆದ್ದಾರಿಗಳಿಂದ ನೇರವಾಗಿ ವಿಜಯಪುರ ವಿಮಾನ ನಿಲ್ದಾಣಕ್ಕೆ ಸಂಪರ್ಕ ಕಲ್ಪಿಸುವ ವಿಶೇಷ ರಸ್ತೆ ಮಾರ್ಗ ನಿರ್ಮಾಣದ ಬಗ್ಗೆಯೂ ಚರ್ಚೆ ನಡೆಸಿದರು.

ವಿಜಯಪುರ ಮಹಾನಗರದಿಂದ ವಿವಿಧ ಪಟ್ಟಣಗಳಿಗೆ ಸಂಪರ್ಕ ಕಲ್ಪಿಸುವಲ್ಲಿ ಬೈಪಾಸ್ ರಸ್ತೆ ನಿರ್ಮಾಣ, ನಗರದಲ್ಲಿ ರಿಂಗ್ ರೋಡ್ ನಿರ್ಮಾಣಕ್ಕೆ ಸಂಬಂಧಿಸಿದಂತೆಯೂ ಸಂಸದ ಜಿಗಜಿಣಗಿ ಮಾಹಿತಿ ಕಲೆ ಹಾಕಿದರು. ರಾಷ್ಟ್ರೀಯ ಹೆದ್ದಾರಿ ಅಭಿವೃದ್ಧಿ ಪ್ರಾಧಿಕಾರದ ಅಧಿಕಾರಿಗಳು ಉಪಸ್ಥಿತರಿದ್ದರು.

# ಕೆರೆಯ ಪಕ್ಕದಲ್ಲೇ ಬಾವಿಗಳನ್ನು ತೋಡಿ ಬೇರೆಡೆಗೆ ನೀರು ಸರಬರಾಜು

## ಕೂಡಗಿ ಗ್ರಾಮದಲ್ಲಿ ಕುಡಿಯುವ ಹಾಗೂ ಕೃಷಿ ಬಳಕೆಯ ಪ್ರಮುಖ ಆಧಾರವಾಗಿರುವ ಸ್ಥಳೀಯ ಕೆರೆ | ಗ್ರಾಮಸ್ಥರ ತೀವ್ರ ಆಕ್ರೋಶ

■ ಉದಯರಶ್ಮಿ ದಿನಪತ್ರಿಕೆ

ಇಂಡಿ: ತಾಲೂಕಿನ ಕೂಡಗಿ ಗ್ರಾಮದಲ್ಲಿ ಕುಡಿಯುವ ಹಾಗೂ ಕೃಷಿ ಬಳಕೆಯ ಪ್ರಮುಖ ಆಧಾರವಾಗಿರುವ ಸ್ಥಳೀಯ ಕೆರೆಯ ಪಕ್ಕದಲ್ಲೇ ಬಾವಿಗಳನ್ನು ತೋಡಿ, ಅಲ್ಲಿಂದ ಬೇರೆಡೆಗೆ ನೀರು ಸರಬರಾಜು ಮಾಡುತ್ತಿರುವ ಗಂಭೀರ ಆರೋಪ ಕೇಳಿಬಂದಿದೆ.

ಇದರಿಂದಾಗಿ ಗ್ರಾಮದ ಅಂತರ್ಜಲ ಮಟ್ಟ ಕುಸಿಯುತ್ತಿದ್ದು, ನೀರಾವರಿ ಜಮೀನುಗಳಿಗೆ ಹಾಗೂ ಗ್ರಾಮಸ್ಥರ ದೈನಂದಿನ ಬಳಕೆಗೆ ತೀವ್ರ ಹೊಡೆತ ಬಿದ್ದಿದೆ ಎಂದು ಗ್ರಾಮಸ್ಥರು ತೀವ್ರ ಆಕ್ರೋಶ ವ್ಯಕ್ತಪಡಿಸಿದ್ದಾರೆ.

ಗ್ರಾಮಸ್ಥರ ಪ್ರಮುಖ ಆರೋಪವೆಂದರೆ, ಸ್ಥಳೀಯರ ಕುಡಿಯುವ ಹಾಗೂ ದೈನಂದಿನ ಬಳಕೆಯ ಹಕ್ಕನ್ನು ಕಸಿದುಕೊಂಡು, ಕೆರೆಯ ಬಾವಿಗಳನ್ನು ನಿರ್ಮಿಸಿ ಅಲ್ಲಿಂದ ಪೈಪ್‌ಲೈನ್ ಅಳವಡಿಸಿ ನೀರನ್ನು ಬೇರೆಡೆಗೆ ಒಯ್ಯಲಾಗುತ್ತಿದೆ. ಈ ಅವೈಜ್ಞಾನಿಕ ನೀರು ಎತ್ತುವಿಕೆಯಿಂದಾಗಿ ಇಡೀ ಕೆರೆಯ ನೀರು ಸಂಪೂರ್ಣವಾಗಿ ಖಾಲಿಯಾಗಿದೆ. ಕೃಷಿಯನ್ನೇ ನಂಬಿಕೊಂಡಿರುವ ರೈತರ ನೀರಾವರಿ ಜಮೀನುಗಳು ಈಗ ನೀರಿನ ಅಭಾವದಿಂದ ಒಣಗುವ ಹಂತಕ್ಕೆ ತಲುಪಿವೆ."ನಮ್ಮ ಗ್ರಾಮದ ಕೆರೆ ಮತ್ತು ಹಳ್ಳಗಳು ನಮ್ಮ ಜೀವನಾಡಿ. ಆದರೆ ಇಲ್ಲಿನ ನೀರನ್ನು ಪೈಪ್‌ಲೈನ್ ಮೂಲಕ ಬೇರೆಡೆಗೆ ಸಾಗಿಸುತ್ತಿರುವುದರಿಂದ ಕೆರೆಯಲ್ಲಿನ ನೀರು ದಿನದಿಂದ ದಿನಕ್ಕೆ ತಳ ಮುಟ್ಟುತ್ತಿದೆ. ನಮ್ಮ ಸ್ವಂತ ಬಳಕೆಗೆ




ಮತ್ತು ಜಮೀನುಗಳಿಗೆ ನೀರಿಲ್ಲದಂತಾಗುತ್ತಿರುವುದು ಅತ್ಯಂತ ಕಳವಳಕಾರಿ ಸಂಗತಿ," ಎಂದು ಸ್ಥಳೀಯರು ಅಳಲು ತೋಡಿಕೊಂಡಿದ್ದಾರೆ.

ತಕ್ಷಣವೇ ಎಚ್ಚೆತ್ತುಕೊಳ್ಳದಿದ್ದರೆ ಮುಂಬರುವ ದಿನಗಳಲ್ಲಿ ಇಡೀ ಕೂಡಗಿ ಗ್ರಾಮ ತೀವ್ರ ಜಲಕ್ಷಾಮ ಎದು-ರಿಸಬೇಕಾಗುತ್ತದೆ ಎಂದು ಎಚ್ಚರಿಸಿರುವ ಗ್ರಾಮಸ್ಥರು, ಕೆರೆ ಹಾಗೂ ಹಳ್ಳದ ವ್ಯಾಪ್ತಿಯಲ್ಲಿ ನಿಯಮಬಾಹಿರವಾಗಿ ಕೊರೆಯಲಾಗಿರುವ ಎಲ್ಲಾ ಬಾವಿಗಳನ್ನು ಅಧಿಕಾರಿಗಳು ಕೂಡಲೇ ಸ್ಥಳಕ್ಕೆ ಭೇಟಿ ನೀಡಿ ಮುಚ್ಚಿಸಬೇಕು ಎಂದು ಪ್ರಬಲವಾಗಿ ಆಗ್ರಹಿಸಿದ್ದಾರೆ.

ಸಂಬಂಧಪಟ್ಟ ಆಡಳಿತ ಮಂಡಳಿ ಹಾಗೂ ಅಧಿಕಾ-ರಿಗಳು ಈ ಕೂಡಲೇ ಕ್ರಮ ಕೈಗೊಳ್ಳದಿದ್ದರೆ ಮುಂದಿನ ದಿನಗಳಲ್ಲಿ ಉಗ್ರ ಪ್ರತಿಭಟನೆ ಹಮ್ಮಿಕೊಳ್ಳಲಾಗುವುದು ಎಂದು ಸಾರ್ವಜನಿಕರು ಹಾಗೂ ರೈತರು ಎಚ್ಚರಿಕೆ ನೀಡಿದ್ದಾರೆ.

ಅಂದಾಜು 10 ಕ್ಕೂ ಹೆಚ್ಚು ಬಾವಿಗಳನ್ನು ತೆಗೆದು ಅಲ್ಲಿಯ ನೀರನ್ನು ಬೇರೆ ಗ್ರಾಮಗಳಿಗೆ ಕೃಷಿಗಾಗಿ ಮತ್ತು ಇನ್ನಿತರ ಉದ್ಯೋಗಕ್ಕಾಗಿ ಬಳಸುತ್ತಿದ್ದಾರೆ. ಭಾವಿಯಿಂದ ಅಡ್ಡವಾಗಿ ಕೆರೆಗೆ ಬೋರ ಕೊರೆದು ನೀರು ಪಡೆಯುತ್ತಿದ್ದಾರೆ ಎಂಬುದು ಗ್ರಾಮಸ್ಥರ ಆರೋಪ. ಅದಲ್ಲದೆ ಪ್ರತಿ ಬಾವಿಗೆ ನಾಲ್ಕಕ್ಕೂ ಹೆಚ್ಚು 12 ಎಚ್ ಪಿ ಮೋಟಾರುಗಳನ್ನು ಅಳವಡಿಸಿ ನೀರನ್ನು ಪಡೆಯುತ್ತಿದ್ದಾರೆ.

ಇಲ್ಲಿಯ ಕೆರೆಗೆ ಕೃಷ್ಣಾ ಮೇಲ್ದಂಡೆ ಯೋಜನೆಯ ತಿಡಗುಂದಿ ಶಾಖಾ ಕಾಲುವೆಯಿಂದ ನೀರು ಬರುತ್ತದೆ. ಕೆರೆ ತುಂಬ ನೀರು ಬಿಡುತ್ತಾರೆ. ಆದರೆ ಆ ನೀರು ಸೋರಿಕೆಯಾಗಿ ಕೆರೆಯ ಪಕ್ಕದಲ್ಲಿರುವ ಭಾವಿಯಲ್ಲಿ ಜಮೆಯಾಗುತ್ತವೆ ಎಂಬುದು ಇಲ್ಲಿಯ ರೈತರ ಆರೋಪ.

ಈ ಕುರಿತು ಹಲವಾರು ಬಾರಿ ಮೇಲಾಧಿಕಾ-ರಿಗಳಿಗೆ ಮನವಿ ಮಾಡಿದರೂ ಪ್ರಯೋಜನವಾಗಿಲ್ಲ ಎಂಬುದು ಗ್ರಾಮಸ್ಥರ ವಾದವಾಗಿದೆ.

ಚಂದ್ರಶೇಖರ ಖಾನಾಪುರ, ಸಿದಲಿಂಗ ಖಾನಾಪುರ, ರಮೇಶ ಮೇಡೇದಾರರ, ಜ್ಞಾನೇಶ್ವರ ಠೋಕೆ, ಧನರಾಜ ಠೋಕೆ, ಮಲ್ಲಿಕಾರ್ಜುನ ದಳವಾಯಿ, ಸಿದ್ದಪ್ಪ ನಾಯಿಕೊಡಿ, ಶಾಂತಪ್ಪ ಮಸಳಿ, ರಾಮಚಂದ್ರ ಠೋಕೆ ಸೋಮಲಿಂಗ ಸಿನ್ನೂರ ಮತ್ತಿತರರು ನ್ಯಾಯ ದೊರೆಯದಿದ್ದರೆ ಉಗ್ರ ಹೋರಾಟ ಮಾಡಲಾಗುವುದೆಂದು ತಿಳಿಸಿದ್ದಾರೆ.

"ಕೂಡಗಿ ಕೆರೆಯ ಪಕ್ಕದ ಹಳ್ಳದಲ್ಲಿ ಭಾವಿ ತೋಡಿ ನೀರು ಪೈಪ್‌ಲೈನ್ ಮುಖಾಂತರ ಬೇರೆಕಡೆ ಒಯ್ಯುತ್ತಿರುವ ಬಗ್ಗೆ ಮಾಹಿತಿ ಇಲ್ಲ. ಸ್ಥಳಕ್ಕೆ ಭೇಟಿ ನೀಡಿ ಪರಿಶೀಲಿಸಲಾಗುವುದು."

■ ಚಿದಾನಂದ ಗುರುಸ್ವಾಮಿ
ಕಂದಾಯ ಉಪವಿಭಾಗಾಧಿಕಾರಿ, ಇಂಡಿ.

"ಕೂಡಗಿ ಕೆರೆ ತುಂಬಿದಾಗ ಮಾತ್ರ ಎಲ್ಲರಿಗೂ ನೀರು ಸಿಗಲು ಸಾಧ್ಯ. ಇಲ್ಲದಿದ್ದರೆ ಅನಧಿಕೃತವಾಗಿ ಕೆರೆಯ ನೀರನ್ನು ಬೇರೆ ಗ್ರಾಮದವರು ತೆಗೆದುಕೊಂಡು ಹೋಗುವದು ನಿಲ್ಲಿಸಬೇಕು. ಸಂಬಂಧ ಪಟ್ಟ ಅಧಿಕಾರಿಗಳು ಕೆರೆಯ ಸುತ್ತಲಿನ ಭಾವಿಗಳನ್ನು ಮುಚ್ಚಿಸುವ ಕಾರ್ಯ ಮಾಡಬೇಕು."

■ ಗುರುನಾಥ ಬಗಲಿ
ರೈತ ಹೋರಾಟಗಾರರು, ಗುಂದವಾನ


"ಕೂಡಗಿ ಕೆರೆಯ ನೀರನ್ನು ಬೇರೆ ಗ್ರಾಮದ ಜನರು ಬಾವಿ ತೋಡಿ ತೆಗೆದುಕೊಂಡು ಹೋಗಿ ಬಳಸುತ್ತಿರುವ ಕುರಿತು ಸ್ಥಳಕ್ಕೆ ಭೇಟಿ ನೀಡಿ ಸೂಕ್ತ ಕ್ರಮ ಕೈಕೊಳ್ಳಲು ಸಣ್ಣ ನೀರಾವರಿ ಅಭಿಯಂತರರಿಗೆ ಸೂಚನೆ ನೀಡಿದ್ದೇನೆ. ಅವರು ಸ್ಥಳಕ್ಕೆ ಭೇಟಿ ನೀಡಿ ವಾಸ್ತವಾಂಶ ತಿಳಿದುಕೊಂಡ ನಂತರ ಮುಂದೆ ಏನು ಮಾಡುವುದರ ಬಗ್ಗೆ ತೀರ್ಮಾನ ಮಾಡುತ್ತೇವೆ."

■ ನಾಗೇಂದ್ರ ಕೋಳಶೆಟ್ಟಿ
ತಹಸೀಲದಾರರು, ಇಂಡಿ

# ಆತಂಕಕ್ಕೆ ಕೊನೆ ಹಾಡಿ ಈ ಕ್ಷಣ ಬದುಕಿ

■ ಉದಯರಶ್ಮಿ ದಿನಪತ್ರಿಕೆ

## ಜಯ್ ನುಡಿ
## (ವ್ಯಕ್ತಿತ್ವ ವಿಕಸನ ಕುರಿತ ಲೇಖನ ಮಾಲಿಕೆ)





ಥಾಮಸ್ ಅಲ್ವಾ ಎಡಿಸನ್ ವಿದ್ಯುತ್ ದ್ವೀಪವನ್ನು ಕಂಡು ಹಿಡಿಯುವ ಮುನ್ನ ಸಾವಿರಾರು ಬಾರಿ ವಿಫಲರಾಗಿದ್ದರು. ಅವರು ಪ್ರತಿ ಬಾರಿಯೂ ಆತಂಕಪಟ್ಟು ಪ್ರಯತ್ನವನ್ನು ನಿಲ್ಲಿಸಿದ್ದರೆ ಇಂದು ಜಗತ್ತು ಕತ್ತಲಲ್ಲಿ ಮುಳುಗಿರುತ್ತಿತ್ತು. ವೈಫಲ್ಯಗಳಿಗೆ ಆತಂಕ ಪಟ್ಟು, ಪ್ರಯತ್ನಗಳಿಗೆ ಬೆನ್ನು ತೋರುವ ಬದಲು ಆತಂಕವನ್ನು ಹೊಸ ಪಾಠವೆಂದು ಸ್ವೀಕರಿಸಬೇಕು ಎಂಬ ಸಂದೇಶವನ್ನು ಎಡಿಸನ್ ಜೀವನದಿಂದ ಕಲಿಯಬೇಕು.

**ಆತಂಕವೆಂದರೆ...?**

ಆತಂಕ ಎನ್ನುವುದು ಭವಿಷ್ಯದಲ್ಲಿ ನಡೆಯಬಹುದಾದ ಕಾಲ್ಪನಿಕ ಅಪಾಯ ಅಥವಾ ತೊಂದರೆಯ ಬಗ್ಗೆ ಮನಸ್ಸಿನಲ್ಲಿ ಮೂಡುವ ಅತಿಯಾದ ಭಯ ಮತ್ತು ಒತ್ತಡದ ಸ್ಥಿತಿ. ಸ್ವಾಮಿ ವಿವೇಕಾನಂದರ ಪ್ರಕಾರ ಆತಂಕ ಎನ್ನುವುದು ಹೊರಗಿನ ಜಗತಿನಿಂದ ಬರುವುದಿಲ್ಲ. ನಮ್ಮ ಮನಸ್ಸು ಸೃಷ್ಟಿಸುವ ದುರ್ಬಲ ಆಲೋಚನೆಗಳೇ ಆತಂಕಕ್ಕೇ ಮೂಲ. ಅದಕ್ಕೆ ಅವರು ಹೇಳಿದ್ದು,' ನಿಮ್ಮ ಆಲೋಚನೆಗಳೇ ನಿಮ್ಮ ಆತಂಕಕ್ಕೆ ಕಾರಣ.' ಎಂದು. ಆತಂಕವೆಂದರೆ 'ನಡೆಯದ ಘಟನೆಗಳ ಬಗ್ಗೆ ಮುಂಚಿತವಾಗಿಯೇ ಹೆದರುವುದು.' ನನ್ನ ಜೀವನದಲ್ಲಿ ಸಾವಿರಾರು ಸಮಸ್ಯೆಗಳನ್ನು ಎದುರಿಸಿದ್ದೇನೆ, ಆದರೆ ಅವುಗಳಲ್ಲಿ ಬಹುಪಾಲು ಸಮಸ್ಯೆಗಳು ಕೇವಲ ನನ್ನ ಕಲ್ಪನೆಯಲ್ಲಿದ್ದವು, ನಿಜ ಜೀವನದಲ್ಲಿ ಎಂದಿಗೂ ಸಂಭವಿಸಲೇ ಇಲ್ಲ. ಎಂದಿದ್ದಾನೆ ಅಮೆರಿಕನ್ ಪ್ರಸಿದ್ಧ ಲೇಖಕ ಮಾರ್ಕ್ ಟ್ವೇನ್.

**ಎದುರಿಸುವ ಆತಂಕಗಳು**

ದೈನಂದಿನ ಜೀವನದಲ್ಲಿ ನಾವು ಅನೇಕ ವಿಷಯದ ಬಗ್ಗೆ ಆತಂಕವನ್ನು ಎದುರಿಸುತ್ತಲೇ ಇರುತ್ತೇವೆ. ಟ್ರಾಫಿಕ್‌ನಲ್ಲಿ ಸಿಲುಕಿಕೊಂಡಾಗ ಗಡಿಯಾರ ನೋಡುತ್ತ, ಬಸ್/ಟ್ರೇನ್ ಮಿಸ್ ಆದ್ರೆ ಹೇಗೆ ಎಂದು ಒದ್ದಾಡುವುದು. ಯುದ್ಧದ ಸುದ್ದಿಯಿಂದಾಗಿ ಪ್ರತಿಯೊಬ್ಬರಲ್ಲಿ ಆತಂಕ ಮೂಡುತ್ತದೆ. ಆಫೀಸ್ ಮೀಟಿಂಗ್‌ನಲ್ಲಿ ಎಲ್ಲರ ಮುಂದೆ ನಿಂತು ಪ್ರಾಜೆಕ್ಟ್ ವಿವರಿಸುವ ಮುನ್ನ, ಸಾರ್ವಜನಿಕ ಭಾಷಣದ ಮುನ್ನ ಎದೆಬಡಿತ ಜೋರಾಗುವುದು. ಸಂದರ್ಶನದ ಸಮಯದಲ್ಲಿ ಕೈಕಾಲು ಬೆವರುವುದು. ಮನೆಯಿಂದ ಹೊರಗೆ ಹೋದಾಗ ಮೊಬೈಲ್ ಬ್ಯಾಟರಿ ಕಡಿಮೆ ಆಯಿತೆಂದರೆ ಮತ್ತು ಚಾರ್ಜರ್ ಇಲ್ಲದಿದ್ದಾಗ ಸಂಪರ್ಕ ಕಡಿತಗೊಳ್ಳುತ್ತದೆ ಎಂದು ಗಾಬರಿಯಾಗುವುದು. ನ್ಯೂಸ್‌ನಲ್ಲಿ ಲೇ-ಆಫ್ ಬಗ್ಗೆ ಕೇಳಿದಾಗ, ಮುಂದಿನ ಸರತಿ ನನ್ನದೇ ಇರಬಹುದೇ? ಎಂದು ಚಿಂತಿಸುವುದು. ಅಪರಿಚಿತ ನಂಬರಿನಿಂದ ಫೋನ್ ಬಂದಾಗ ಅಥವಾ ಯಾರಿಗಾದರೂ ಫೋನ್ ಮಾಡಿ ಮಾತನಾಡಬೇಕಾದಾಗ ಮನಸ್ಸಿನಲ್ಲಿ ಸಣ್ಣ ಆತಂಕ ಮೂಡುವುದು. ಸಾಮಾನ್ಯವಾಗಿ ವಿದ್ಯಾರ್ಥಿಗಳಲ್ಲಿ ಪರೀಕ್ಷೆಯ ಫಲಿತಾಂಶದ ಕುರಿತು ಆತಂಕವಿರುತ್ತದೆ. ಆತಂಕದ ಬಗ್ಗೆ ಹೇಳುತ್ತ ಹೋದರೆ ಹನುಮನ ಬಾಲದಂತೆ ಪಟ್ಟಿ ಬೆಳೆಯುತ್ತಲೇ ಹೋಗುತ್ತದೆ.

**ಅತಿಯಾದ ಯೋಚನೆ**

ಹೆಚ್ಚು ಜನರಿರುವ ಪಾರ್ಟಿಗೆ ಇಲ್ಲವೇ ಮದುವೆ ಸಮಾರಂಭಗಳಿಗೆ ಹೋದಾಗ ಎಲ್ಲರೂ ನನ್ನನ್ನೇ ನೋಡುತ್ತಿದ್ದಾರೆ ಎಂದು ಮುಜುಗರ ಪಡುವುದು. ತಡರಾತ್ರಿಯಾದರೂ ಮಕ್ಕಳು ಮನೆಗೆ ಮರಳದೇ ಇದ್ದಾಗ ಮತ್ತು ಫೋನ್ ಕನೆಕ್ಟ್ ಆಗದೇ ಇದ್ದಾಗ ಪೋಷಕರಲ್ಲಿ ಮೂಡುವ ಕೆಟ್ಟ ಆಲೋಚನೆಗಳು ಮತ್ತು ತಳಮಳವನ್ನು ಕಾಣುತ್ತೇವೆ. ವಾಟ್ಸಪ್‌ನಲ್ಲಿ ಕಳುಹಿಸಿದ ಪ್ರಮುಖ ಮೆಸೇಜ್‌ಗೆ ಬ್ಲೂ ಟಿಕ್ ಬಂದರೂ ಆ ಕಡೆಯಿಂದ ಗಂಟೆಗಳ ಕಾಲ ರಿಪ್ಲೈ ಬರದಿದ್ದಾಗ ಅತಿಯಾಗಿ ಯೋಚಿಸುವುದು. ಹಾಗೆ ನೋಡಿದರೆ ಆತಂಕವೆನ್ನುವುದು ಪ್ರತಿಯೊಬ್ಬರ ಜೀವನದಲ್ಲಿ ಎದುರಾಗುವ ಒಂದು ಸಾಮಾನ್ಯ ಭಾವನೆ. ಅದರಿಂದ ಆಚೆ ಬರುವುದು ಹೇಗೆ ಎಂಬುದಕ್ಕೆ ಇಲ್ಲಿವೆ ಕೆಲವು ತಂತ್ರಗಳು.



**ಧನಾತ್ಮಕ ಆಲೋಚನೆ**

ಆತಂಕದಲ್ಲಿದ್ದಾಗ ಮೆದುಳು ಕೇವಲ ಸಮಸ್ಯೆಗಳ ಬಗ್ಗೆ ಮಾತ್ರ ಯೋಚಿಸುತ್ತದೆ. ಆದರೆ ಧನಾತ್ಮಕ ಮನಸ್ಥಿತಿಯು ಸಮಸ್ಯೆಯನ್ನು ಬಿಟ್ಟು, 'ಇದನ್ನು ಹೇಗೆ ಬಗೆಹರಿಸಬಹುದು?'ಎಂದು ಪರಿಹಾರದ ಕಡೆಗೆ ಗಮನ ಹರಿಸುತ್ತದೆ. ಇದರಿಂದ ಆತಂಕ ನಿವಾರಣೆಯಾಗುತ್ತದೆ. 'ಒಂದು ಸಮಸ್ಯೆಗೆ ಪರಿಹಾರವಿದ್ದರೆ, ಚಿಂತಿಸುವ ಅಗತ್ಯವಿಲ್ಲ. ಒಂದು ಸಮಸ್ಯೆಗೆ ಪರಿಹಾರವೇ ಇಲ್ಲದಿದ್ದರೆ ಚಿಂತಿಸುವುದರಿಂದ ಯಾವುದೇ ಪ್ರಯೋಜನವಿಲ್ಲ.'ಎಂದು ಮಾರ್ಮಿಕವಾಗಿ ಹೇಳಿದ್ದಾರೆ ದಲೈ ಲಾಮಾ. ಅವರ ಪ್ರಕಾರ ಆತಂಕ ಎನ್ನುವುದು ಪ್ರಸ್ತುತ ಕ್ಷಣದಲ್ಲಿ ಬದುಕದೆ ಇರುವುದರ ಪರಿಣಾಮ.' ನಿಯಂತ್ರಣದಲ್ಲಿ ಇಲ್ಲದ ವಿಷಯಗಳ ಬಗ್ಗೆ ಅತಿಯಾಗಿ ಯೋಚಿಸುವುದು ಆತಂಕಕ್ಕೆ ಎಡೆಮಾಡುತ್ತದೆ. ಆದ್ದರಿಂದ ಭವಿಷ್ಯದ ಬಗ್ಗೆ ಅತಿಯಾಗಿ ಆಲೋಚಿಸುವುದನ್ನು ನಿಲ್ಲಿಸಬೇಕು. ಪ್ರಸ್ತುತ ಕ್ಷಣದಲ್ಲಿ ಬದುಕುವುದನ್ನು ಕಲಿಯಬೇಕು.

**ನಿಭಾಯಿಸಿ**

ಪರಿಸ್ಥಿತಿಗಳು ನಮ್ಮ ಕೈಯಲ್ಲಿರುವುದಿಲ್ಲ. ಆದರೆ ಅವುಗಳ ನಿಭಾಯಿಸುವ ರೀತಿ ಖಂಡಿತ ನಮ್ಮ ಕೈಯಲ್ಲಿರುತ್ತದೆ. ಇನ್ನೊಂದು ನಿಜಾಂಶವೆಂದರೆ, ಯಾವುದೇ ಪರಿಸ್ಥಿತಿಗಳು ಆತಂಕವನ್ನು ಹೊಂದಿರುವುದಿಲ್ಲ. ಆ ಪರಿಸ್ಥಿತಿಯ ಬಗೆಗೆ ಯೋಚಿಸುತ್ತ ನಾವು ಆತಂಕಕ್ಕೆ ಒಳಗಾಗುತ್ತೇವೆ. ಪರಿಸ್ಥಿತಿಗಳನ್ನು ನಾವು



ಹೇಗೆ ನೋಡುತ್ತೇವೆ ಮತ್ತು ಹೇಗೆ ಸ್ವೀಕರಿಸುತ್ತೇವೆ ಎಂಬುದು ಆತಂಕವನ್ನು ನಿರ್ಧರಿಸುತ್ತದೆ. ರೋಮನ್ ಚಕ್ರವರ್ತಿ ಮತ್ತು ತತ್ವಜ್ಞಾನಿ ಮಾರ್ಕಸ್ ಔರೆಲಿಯಸ್ ಹೇಳಿದ ಮಾತು ಹೀಗಿದೆ. 'ಇಂದು ನಾನು ಆತಂಕದಿಂದ ಹೊರಬಂದೆ. ಅಥವಾ, ನಾನು ಆತಂಕವನ್ನು ನನ್ನಿಂದ ಹೊರಹಾಕಿದೆ ಎಂದು ಹೇಳಬಹುದು; ಏಕೆಂದರೆ ಆತಂಕವು ನನ್ನ ಒಳಗೇ ಇತ್ತು, ನನ್ನ ಹೊರಗಿನ ಪರಿಸ್ಥಿತಿಯಲ್ಲಲ್ಲ.' ಆದ್ದರಿಂದ ನಾವು ಪರಿಸ್ಥಿತಿಗಳ ಬಗ್ಗೆ ತಲೆಕೆಡಿಸಿಕೊಳ್ಳದೇ ನಿಭಾಯಿಸುವುದರತ್ತ ಚಿತ್ತ ಹರಿಸಬೇಕು.

**ದೃಷ್ಟಿಕೋನ**

ನಮ್ಮ ಹಳೆಯ ಸೋಲುಗಳನ್ನು ಹರವಿಕೊಂಡು ಹೆದರುತ್ತೇವೆ. ಸಾಮರ್ಥ್ಯಗಳನ್ನು ನಂಬದೇ ಎದೆಗುಂದುತ್ತೇವೆ. ಎಡಿಸನ್ ಅವರ ಉದಾಹರಣೆಯಂತೆ ಅವರು ಸೋತಿದ್ದರು, ಆದರೆ ಗೆದ್ದರು; ನಾನೂ ಗೆಲ್ಲಬಲ್ಲೆ.' ಎಂಬ ಸಕಾರಾತ್ಮಕ ದೃಷ್ಟಿಕೋನವನ್ನು ಹೊಂದುವುದು ಉತ್ತಮ. ಭವಿಷ್ಯದ ಅನಿಶ್ಚಿತತೆಯ ಕುರಿತು ಯೋಚಿಸುತ್ತ ಇಂದಿನ ದಿನವನ್ನು ಹಾಳು ಮಾಡಿಕೊಳ್ಳುವುದು ಆತಂಕ. ಇದನ್ನೇ ಪ್ರಸಿದ್ಧ ಮಾಧ್ಯಮ ವ್ಯಕ್ತಿತ್ವವಾಗಿರುವ ಒಪ್ರಾ ವಿನ್‌ಫ್ರೇ ಹೀಗೆ ಹೇಳಿದ್ದಾರೆ 'ಆತಂಕ ಎನ್ನುವುದು ನಿಮ್ಮ ಶಕ್ತಿಯನ್ನು ಪ್ರಸ್ತುತ ಕ್ಷಣದಿಂದ ಕಸಿದುಕೊಂಡು, ಇನ್ನೂ ಬಾರದ ಭವಿಷ್ಯದ ಮೇಲೆ ವ್ಯರ್ಥ ಮಾಡುವುದಾಗಿದೆ.

**ಗಮನ ಹರಿಸಿ**

ನೈಜ ಪರಿಸ್ಥಿತಿಯತ್ತ ಗಮನಹರಿಸುವುದು ಆತಂಕವನ್ನು ನಿಯಂತ್ರಿಸಲು ಇರುವ ಅತ್ಯಂತ ಪರಿಣಾಮಕಾರಿ ಮಾರ್ಗ. ಮನದಲ್ಲಿ ಆತಂಕ ಮೂಡಿದಾಗ 'ನಾನು ಯೋಚಿಸುತ್ತಿರುವುದು ಈಗ ನಿಜವಾಗಿಯೂ ನಡೆಯುತ್ತಿದೆಯೇ? ಎಂದು ಪ್ರಶ್ನಿಸಿಕೊಳ್ಳಿ. ನಾನು ಸುಮ್ಮನೆ ಹೆದರುತ್ತಿದ್ದೇನೆಯೇ? ಎಂದು ಯೋಚಿಸಿದಾಗ ಆತಂಕ ತಾನಾಗಿಯೇ ಕರಗಿ ಹೋಗುತ್ತದೆ. ಆತಂಕ ಎನ್ನುವುದು ಹೆಚ್ಚಾಗಿ ಭವಿಷ್ಯದಲ್ಲಿ ನಡೆಯಬಹುದಾದ ಕೆಟ್ಟ ಘಟನೆಗಳ ಕಲ್ಪನೆಯಾಗಿರುತ್ತದೆ. ಧನಾತ್ಮಕ ಚಿಂತನೆಯು ನಮ್ಮ ಗಮನವನ್ನು ಮುಂಬರುವ ಕಾಲ್ಪನಿಕ ಭಯದಿಂದ ಇಂದಿನ ನೈಜ ಪರಿಸ್ಥಿತಿಯ ಕಡೆಗೆ ತಿರುಗಿಸುತ್ತದೆ. ನಿಯಂತ್ರಣವಿಲ್ಲದ ವಿಷಯಗಳ ಮೇಲೆ ಗಮನ ಹರಿಸುತ್ತ ಆತಂಕಕ್ಕೆ ಬಲಿಯಾಗುವುದಕ್ಕಿಂತ ನೈಜ ಪರಿಸ್ಥಿತಿಯತ್ತ ಗಮನ ಹರಿಸುವುದು ಒಳಿತು.

**ಕೊನೆ ಹನಿ**

ಆತಂಕ ಎನ್ನುವುದು ಕೇವಲ ಮನಸ್ಸಿನ ಒಂದು ಕಲ್ಪನೆ. ಪ್ರಸ್ತುತ ಜೀವನವೇ ನಿಜವಾದ ಜೀವನ. ಆದರೆ ಮನಸ್ಸು ಕಾಲ್ಪನಿಕ ಚಿಂತೆಗಳತ್ತ ಓಡುವಾಗ ಅದನ್ನು ತಡೆಯುವುದು ನಮ್ಮ ಜವಾಬ್ದಾರಿ ಆಗಿದೆ. ಯಾವುದೇ ಕ್ಷೇತ್ರದಲ್ಲಿ ಅಪಾರ ಸಾಧನೆ ಮಾಡಿದ ಸಾಧಕರು ಸಹ ಆತಂಕವನ್ನು ಎದುರಿಸಿದವರೇ ಆಗಿದ್ದಾರೆ. ಎಂಬುದನ್ನು ನೆನಪಿಡಿ. 'ಸಮಸ್ಯೆಗಳು ಎಲ್ಲರ ಜೀವನದಲ್ಲೂ ಬರುತ್ತವೆ. ಆದರೆ ಆತಂಕಪಟ್ಟು ಕುಳಿತುಕೊಳ್ಳುವ ಬದಲು, ಆ ಸಮಸ್ಯೆಗಳನ್ನು ಎದುರಿಸುವ ಧೈರ್ಯವನ್ನು ನಾವು ಬೆಳಸಿಕೊಳ್ಳಬೇಕು. ಆಗ ಆತಂಕ ತಾವಾಗಿಯೇ ದೂರವಾಗುತ್ತದೆ.' ಎಂದು ದಾರಿ ತೋರಿದ್ದಾರೆ ಎಪಿಜೆ ಅಬ್ದುಲ್ ಕಲಾಂ. ಒಟ್ಟಿನಲ್ಲಿ ನಮ್ಮ ಮನಸ್ಸಿನಲ್ಲಿ ಮೂಡುವ ಅತಿಯಾದ ಚಿಂತೆ ಮತ್ತು ಭಯವೇ ಆತಂಕವಾಗಿ ಬದಲಾಗುತ್ತದೆ. ನಾಳೆ ಏನಾಗಬಹುದು ಎಂಬ ಆತಂಕ ಕಾಡುತ್ತಿರುವಾಗ,'ಈಗ ನಾನು ಏನು ಮಾಡಬಲ್ಲೆ.' ಎಂದು ಯೋಚಿಸಿದಾಗ ಆತಂಕಕ್ಕೆ ಕೊನೆ ಹಾಡಬಲ್ಲೆವು. ಜೊತೆಗೆ ನೆಮ್ಮದಿಯ ತೀರದಲ್ಲಿ ಈ ಕ್ಷಣ ಬದುಕಬೇಕೆಂಬ ಹೊಸ ಪಯಣ ಶುರುವಾಗುವುದು.

ಲೇಖನ
– ಜಯಶ್ರೀ.ಜೆ. ಅಬ್ಬಿಗೇರಿ.
ಇಂಗ್ಲೀಷ್ ಉಪನ್ಯಾಸಕರು
ಬೆಳಗಾವಿ
ಮೊ: 9449234142



# ಕಲಬುರಗಿ ಬಹಮನಿ ಕೋಟೆ ಅಭಿವೃದ್ಧಿಪಡಿಸಲು ಸಿಎಂಗೆ ಕರವೇ ಮನವಿ



ಕಲಬುರಗಿ:ನಗರದ ಹೃದಯ ಭಾಗದಲ್ಲಿರು ಬಹುಮನಿ ಕೋಟೆಯನ್ನು ಅಭಿವೃದ್ಧಿಪಡಿಸಿ ಹಾಗೂ ಕೋಟೆಯನ್ನು ಪ್ರವಾಸಿಗರ ತಾಣವಾಗಿ ಮಾಡಬೇಕು ಎಂದು ಕರವೇ(ಪ್ರವೀಣ ಶೆಟ್ಟಿ) ಬಣದ ನಗರ ಅಧ್ಯಕ್ಷ ಶರಣು ದ್ಯಾಮ ನೇತೃತ್ವದಲ್ಲಿ ಸಿಎಂ ಡಿ.ಕೆ.ಶಿವಕುಮಾರ ಅವರಿಗೆ ಮನವಿ ಪತ್ರ ಸಲ್ಲಿಸಿದ್ದರು.

ಈ ಕುರಿತು ಸಿಎಂಗೆ ಮನವಿ ಸಲ್ಲಿಸಿದ ಅವರು,ದೇಶದ ಅತಿ ದೊಡ್ಡ ಪ್ರಾಚೀನ ತೋಪನ್ನು ಹೊಂದಿರುವ ಕಲಬುರಗಿಯ ಬಹಮನಿ ಕೋಟೆಯಲ್ಲಿ ಸರಿಯಾದ ನಡಿಗೆ ಪಥ ಇಲ್ಲದಿರುವುದು ರಸ್ತೆಯಲ್ಲಿ ನೀರು ಹರಿಯುತ್ತಿರುವುದು. ಅಲ್ಲದೇ ಬೃಹತ್ ತೋಪು ವೀಕ್ಷಣೆಗೆ ಹೋಗುವ ದಾರಿ ಸಮರ್ಪಕವಾಗಿ ಇರುವುದಿಲ್ಲ. ಕೋಟೆಯಲ್ಲಿ ಗಿಡ-ಗಂಟಿಗಳು ಬೆಳೆದು ಕೋಟೆ ಹಾಳಾಗುತ್ತಿದೆ. ಹಾಗೂ ಕೋಟೆಯಲ್ಲಿ ವಾಸವಾಗಿರುವ ಜನರನ್ನು ಪ್ರತ್ಯೇಕವಾಗಿ ಮನೆ ನೀಡಿ ಸ್ಥಳಾಂತರಿಸುವದು. ಕೋಟೆಯಲ್ಲಿ ಸಾರ್ಜನಿಕರಿಗೆ ಮುಕ್ತವಾಗಿ ಓಡಾಟ ಮಾಡಲು ಅನುಕೂಲ ಮಾಡಿಕೊಡಬೇಕು. ಮತ್ತು ಕಲಬುರಗಿ ಬಹಮನಿ ಕೋಟೆ ಅಭಿವೃದ್ದಿ ಪಡಿಸಿ ಪ್ರವಾಸಿಗರ ತಾಣವಾಗಿ ನಿರ್ಮಾಣ ಮಾಡುವುದು, ಸಾರ್ವಜನಿಕರಿಗೆ ತಂಗುದಾಣ, ಲೈಟಿಂಗ್ ವ್ಯವಸ್ಥೆ, ಕುಡಿಯುವ ನೀರು, ಶೌಚಾಲಯ ನಿರ್ಮಾಣ ವ್ಯವಸ್ಥೆ ಸೇರಿದಂತೆ ಇತರೆ ಬೇಡಿಕೆಗಳಿಗೆ ಸ್ಪಂದಿಸಬೇಕು. ಆದಕಾರಣ ತಾವುಗಳು ಸಂಬಂಧಪಟ್ಟ ಪ್ರವಾಸೋದ್ಯಮ ಇಲಾಖೆಯಿಂದ ಕಲಬುರಗಿ ಬಹಮನಿ ಕೋಟೆ ಅಭಿವೃದ್ದಿ ಪಡಿಸಿ,ಪ್ರವಾಸಿಗರ ತಾಣವಾಗಿ ನಿರ್ಮಾಣ ಮಾಡಿ ಸಾರ್ವಜನಿಕರಿಗೆ ವೀಕ್ಷಣೆ ಮಾಡಲು ಅನುವು ಮಾಡಿಕೊಡಬೇಕೆಂದು ಅವರು ಮನವಿ ಮಾಡಿಕೊಂಡರು.

ಈ ಸಂದರ್ಭದಲ್ಲಿ ಸಂಘಟನೆಯ ಕಲ್ಯಾಣ ಕರ್ನಾಟಕ ಪ್ರಧಾನ ಕಾರ್ಯದರ್ಶಿ ಗೋಪಾಲ ನಾಟೀಕಾರ,ಜಿಲ್ಲಾಧ್ಯಕ್ಷ ವಿಶ್ವನಾಥ ಪಾಟೀಲ,ಕಲಬುರಗಿ ತಾಲೂಕು ಅಧ್ಯಕ್ಷ ವಿಜಯಕುಮಾರ ಅಂಕಲಗಿ, ಮಂಜುನಾಥ ಮಠಪತಿ,ಮನೋಹರ ಬೀರನೂರ ಸೇರಿದಂತೆ ಇತರರು ಇದ್ದರು.

# ಜು.8 ರಂದು ಭೀಮಾ ನದಿಗೆ ನೀರು ಹರಿಸಲು ಒತ್ತಾಯಿಸಿ ಬೃಹತ್ ಪ್ರತಿಭಟನೆ

ಅಫಜಲಪುರ:ಜೂನ್ ತಿಂಗಳಲ್ಲಿ ವಾಡಿಕೆಯಷ್ಟು ಮಳೆಯಾಗದ ಹಿನ್ನೆಲೆಯಲ್ಲಿ ಕಲಬುರಗಿ ಜಿಲ್ಲೆಯಲ್ಲಿ ಬರದ ಛಾಯೆ ಆವರಿಸಿದ್ದು, ಮಹಾರಾಷ್ಟ್ರದ ಉಜನಿ ಜಲಾಶಯದಿಂದ ಕರ್ನಾಟಕದ ಪಾಲಿನ 15 ಟಿಎಂಸಿ ನೀರನ್ನು ತಕ್ಷಣ ಬಿಡುಗಡೆ ಮಾಡದಿದ್ದರೆ ರಾಜ್ಯಾದ್ಯಂತ ಬೀದಿಗಿಳಿದು ಉಗ್ರ ಹೋರಾಟ ನಡೆಸಲಾಗುವುದು ಎಂದು ಕರ್ನಾಟಕ ರಾಜ್ಯ ಕಬ್ಬು ಬೆಳೆಗಾರರ ಸಂಘ ಸರ್ಕಾರಕ್ಕೆ ಎಚ್ಚರಿಕೆ ನೀಡಿದೆ.

ಪಟ್ಟಣದ ಶ್ರೀಗುರು ಮಳೇಂದ್ರ ಮಠದಲ್ಲಿ ಕರ್ನಾಟಕ ರಾಜ್ಯ ಕಬ್ಬು ಬೆಳೆಗಾರರ ಸಂಘದ ತಾಲೂಕು ಘಟಕದ ವತಿಯಿಂದ ನಡೆದ ಸುದ್ದಿಗೋಷ್ಠಿಯಲ್ಲಿ ಸಂಘದ ರಾಜ್ಯ ಉಪಾಧ್ಯಕ್ಷ ಸಿದ್ದರಾಮ ದಣ್ಣೂರ ಮಾತನಾಡಿ, ಕಲಬುರಗಿ ಜಿಲ್ಲೆಯನ್ನು ತಕ್ಷಣ ಬರಪೀಡಿತ ಪ್ರದೇಶವೆಂದು ಘೋಷಿಸಬೇಕು. ಅಫಜಲಪುರ ತಾಲೂಕಿನ ಜೀವನಾಡಿಯಾದ ಭೀಮಾ ನದಿ ಸಂಪೂರ್ಣ ಬತ್ತಿದ್ದು, ರೈತರು, ಕೃಷಿ ಕಾರ್ಮಿಕರು ಹಾಗೂ ಜನಜಾನುವಾರುಗಳು ತೀವ್ರ ಸಂಕಷ್ಟಕ್ಕೆ ಸಿಲುಕಿದ್ದಾರೆ. ರಾಜ್ಯ ಹಾಗೂ ಮಹಾರಾಷ್ಟ್ರ ಸರ್ಕಾರಗಳು ಜಂಟಿ ಸಭೆ ನಡೆಸಿ ಉಜನಿ ಜಲಾಶಯದಿಂದ ಕರ್ನಾಟಕದ ಪಾಲಿನ 15 ಟಿಎಂಸಿ ನೀರನ್ನು ಬಿಡುಗಡೆ ಮಾಡಬೇಕು. ಇಲ್ಲವಾದರೆ ರೈತ ಸಂಘದ ನೇತೃತ್ವದಲ್ಲಿ ಉಗ್ರ ಹೋರಾಟ ಅನಿವಾರ್ಯವಾಗಲಿದೆ ಎಂದು ಎಚ್ಚರಿಸಿದರು.ಭೀಮಾ ನದಿಗೆ ನೀರು ಹರಿಸುವಂತೆ ಹಲವು ಬಾರಿ ಶಾಸಕ ಎಂ.ವೈ. ಪಾಟೀಲ ಅವರ ಗಮನಕ್ಕೆ ತಂದಿದ್ದರೂ ಅವರು ಈ ವಿಚಾರದಲ್ಲಿ ಯಾವುದೇ ಧ್ವನಿ ಎತ್ತಿಲ್ಲ ಎಂದು ಅಸಮಾಧಾನ ವ್ಯಕ್ತಪಡಿಸಿದ ಅವರು, ತಹಶೀಲ್ದಾರ್ ಅವರ ಗಮನಕ್ಕೂ ಸಮಸ್ಯೆಯನ್ನು ಪದೇಪದೇ ತಿಳಿಸಿದರೂ "ನಾಳೆ, ನಾಡಿದ್ದು" ಎಂದು ಹೇಳುತ್ತ ಕಾಲಹರಣ ಮಾಡುತ್ತಿದ್ದಾರೆ ಎಂದು ಆರೋಪಿಸಿದರು.

ರೈತ ಮುಖಂಡ ಅಶೋಕ ಹೂಗಾರ ಗುಡ್ಡೇವಾಡಿ ಮಾತನಾಡಿ, ಮಳೆ ಕೊರತೆಯಿಂದ ಮುಂಗಾರು ಬಿತ್ತನೆ ಕುಂಠಿತಗೊಂಡಿದ್ದು, ಹೆಸರು, ಉದ್ದು, ಸೋಯಾಬೀನ್ ಸೇರಿದಂತೆ ವಿವಿಧ ಬೆಳೆಗಳು ಒಣಗುತ್ತಿವೆ. ಭೀಮಾ ನದಿಯ ನೀರನ್ನು ಅವಲಂಬಿಸಿರುವ ಕಬ್ಬು ಬೆಳೆ ಸಹ ಒಣಗುವ ಹಂತಕ್ಕೆ ತಲುಪಿದ್ದು, ರೇಣುಕಾ, ಕೆಪಿಆರ್, ಕಾರ್ಖಾನೆಗಳಿಗೆ ಕಬ್ಬು ಪೂರೈಸುವ ಸಾವಿರಾರು ರೈತರು ಸಂಕಷ್ಟದಲ್ಲಿದ್ದಾರೆ.

ಸರ್ಕಾರ ತಕ್ಷಣ ನೀರು ಹರಿಸಿ ರೈತರ ಬದುಕು ಉಳಿಸಬೇಕು. ಜೊತೆಗೆ ಗೋಶಾಲೆಗಳನ್ನು ಆರಂಭಿಸಿ ದನಕರುಗಳಿಗೆ ಮೇವು ಹಾಗೂ ಕುಡಿಯುವ ನೀರಿನ ವ್ಯವಸ್ಥೆ ಕಲ್ಪಿಸಬೇಕು ಎಂದು ಆಗ್ರಹಿಸಿದರು.

ಹಿರಿಯ ರೈತ ಮುಖಂಡ ಬಸವರಾಜ ಚಾಂದಕವಟೆ ಮಾತನಾಡಿ, ದೇ.ಗಾಣಗಾಪುರದ ದತ್ತಾತ್ರೇಯ ದೇವಸ್ಥಾನಕ್ಕೆ ಕರ್ನಾಟಕ, ಮಹಾರಾಷ್ಟ್ರ ಹಾಗೂ ಆಂಧ್ರ ಪ್ರದೇಶಗಳಿಂದ ಸಾವಿರಾರು ಭಕ್ತರು ಆಗಮಿಸುತ್ತಿದ್ದು, ಭೀಮಾ ನದಿಯಲ್ಲಿ ನೀರಿಲ್ಲದ ಕಾರಣ ಅಸ್ವಚ್ಛ ನೀರಿನಲ್ಲಿ ಸ್ನಾನ ಮಾಡಿ ದೇವಸ್ಥಾನಕ್ಕೆ ತೆರಳುವ ದುಸ್ಥಿತಿ ನಿರ್ಮಾಣವಾಗಿದೆ. ಆದ್ದರಿಂದ ನಾರಾಯಣಪುರ ಅಥವಾ ಉಜನಿ ಜಲಾಶಯದಿಂದ ತಕ್ಷಣ ಭೀಮಾ ನದಿಗೆ ನೀರು ಹರಿಸಿ, ದೇವಲಗಾಣಗಾಪುರದಲ್ಲಿ ಶುದ್ಧ ಕುಡಿಯುವ ನೀರಿನ ವ್ಯವಸ್ಥೆ ಕಲ್ಪಿಸಬೇಕು ಎಂದು ಒತ್ತಾಯಿಸಿದರು.ಸರ್ಕಾರ ಹಾಗೂ ಜನಪ್ರತಿನಿಧಿಗಳ ನಿರ್ಲಕ್ಷ್ಯ ಖಂಡಿಸಿ ಜುಲೈ 8ರಂದು ಅಫಜಲಪುರ ಪಟ್ಟಣದ ಬಸವೇಶ್ವರ ವೃತ್ತದಲ್ಲಿ ಬೃಹತ್ ಪ್ರತಿಭಟನೆ ಹಮ್ಮಿಕೊಳ್ಳಲಾಗಿದೆ.

ಈ ಪ್ರತಿಭಟನೆಯಲ್ಲಿ ವಿವಿಧ ರೈತ ಸಂಘಟನೆಗಳು, ವಿವಿಧ ಕನ್ನಡಪರ ಸಂಘಟನೆಗಳು ಹಾಗೂ ಸಾರ್ವಜನಿಕರು ಭಾಗವಹಿಸಲಿದ್ದು, ಸರ್ಕಾರ ಬೇಡಿಕೆಗಳಿಗೆ ಸ್ಪಂದಿಸದಿದ್ದರೆ ಹೋರಾಟವನ್ನು ಮತ್ತಷ್ಟು ತೀವ್ರಗೊಳಿಸಲಾಗುವುದು ಎಂದು ಮುಖಂಡರು ಎಚ್ಚರಿಕೆ ನೀಡಿದರು.

# ಜಿಲ್ಲಾ ನ್ಯಾಯಾಲಯಕ್ಕೆ ಹುಸಿ ಬಾಂಬ್ ಸಂದೇಶ: ಪರಿಶೀಲನೆ



ಕಲಬುರಗಿ:ನಗರದಲ್ಲಿನ ಕಲಬುರಗಿ ಜಿಲ್ಲಾ ನ್ಯಾಯಾಲಯದ ಈ-ಮೇಗೆ ಹುಸಿ ಬಾಂಬ್ ಸಂದೇಶ ಬಂದಿದ್ದು, ಕೂಡಲೇ ಸ್ಥಳಕ್ಕೆ ನಗರ ಪೊಲೀಸ್ ಆಯುಕ್ತರಾದ ಡಾ. ಶರಣಪ್ಪ ಎಸ್.ಡಿ., ಡಿಸಿಪಿಗಳಾದ ಶಾಲೂ., ಪ್ರವೀಣ ಹೆಚ್ ನಾಯಕ್ ಅವರು ಸ್ಥಳಕ್ಕೆ ಭೇಟಿ ನೀಡಿ ಸಾರ್ವಜನಿಕರನ್ನು ಬೇರೆ ಕಡೆಗೆ ಸ್ಥಳಾಂತರಿಸಿ, ಬಾಂಬ್ ಪತ್ತೆ ಹಾಗೂ ನಿಷ್ಕ್ರಿಯ ದಳ ಮತ್ತು ವಿದ್ವಂಸಕ ಕೃತ್ಯ ತಪಾಸಣೆ ದಳ ತಂಡವು ಸ್ಥಳ ಪರಿಶಿಲೀಸಲಾಗಿ ಯಾವುದೇ ರೀತಿಯ ಬಾಂಬ್ ಪತ್ತೆಯಾಗಿರುವುದಿಲ್ಲ. ಈ ಘಟನೆಗೆ ಸಂಬಂಧಿಸಿದತೆ ಸ್ಟೇಷನ್ ಬಜಾರ ಠಾಣೆಯಲ್ಲಿ ಪ್ರಕರಣ ದಾಖಲಾಗಿದ್ದು, ಇದೊಂದು ಸುಳ್ಳು ಬೆದರಿಕೆ ಈ-ಮೇಲ್ ಸಂದೇಶವಾಗಿರುವುದರಿಂದ ಸಾರ್ವಜನಿಕರು ಯಾವುದೇ ರೀತಿಯ ಆತಂಕಪಡುವ ಅಗತ್ಯವಿಲ್ಲ ಎಂದು ನಗರ ಪೊಲೀಸ್ ಆಯುಕ್ತ ಡಾ.ಶರಣಪ್ಪ ಎಸ್.ಡಿ.ತಿಳಿಸಿದ್ದಾರೆ.



# ಗ್ರಾಮಗಳ ಬೆಳವಣಿಗೆಯಿಂದ ದೇಶದ ಅಭಿವೃದ್ಧಿ

ಕಲಬುರಗಿ : ಗ್ರಾಮೀಣ ಅಭಿವೃದ್ಧಿಯು ಕೇವಲ ಕೃಷಿಯ ಅಭಿವೃದ್ಧಿಯಲ್ಲ. ಇದು ಗ್ರಾಮೀಣ ಸಮುದಾಯಗಳ ಆರ್ಥಿಕ, ಸಾಮಾಜಿಕ ಮತ್ತು ಸಾಂಸ್ಕೃತಿಕ ಜೀವನದ ಸಮಗ್ರ ಸುಧಾರಣೆಯಾಗಿದೆ. ಬಡತನ ನಿರ್ಮೂಲನೆ, ವಿದ್ಯುತ್, ನೀರು, ರಸ್ತೆ ನಿರ್ಮಾಣಂತಹ ಮೂಲಭೂತ ಸೌಕರ್ಯಗಳನ್ನು ಒದಗಿಸಿ, ನಗರೀಕರಣಕ್ಕೆ ವಲಸೆ ಹೋಗುವುದನ್ನು ತಡೆಯಲು, ಉದ್ಯೋಗಾವಕಾಶಗಳನ್ನು ಸೃಷ್ಟಿಸುವಲ್ಲಿ ಅತ್ಯಂತ ಪ್ರಮುಖ ಪಾತ್ರ ವಹಿಸುತ್ತದೆ. ಗ್ರಾಮೀಣ ಪ್ರದೇಶಗಳ ಬೆಳವಣಿಗೆಯಿಂದ ದೇಶದ ಅಭಿವೃದ್ಧಿ ಸಾಧ್ಯವಿದೆ ಎಂದು ಅರ್ಥಶಾಸ್ತ್ರ ಉಪನ್ಯಾಸಕ ಎಚ್.ಬಿ.ಪಾಟೀಲ ಹೇಳಿದರು. ಜೇವರ್ಗಿ ತಾಲೂಕಿನ ಗುಡೂರ(ಎಸ್ ಎ) ಗ್ರಾಮದ 'ಸಜ್ಜನ ಶ್ರೀ ಸಂಗಮೇಶ್ವರ ದೇವಾಲಯ'ದಲ್ಲಿ ಕಲಬುರಗಿಯ 'ಬಸವೇಶ್ವರ ಸಮಾಜ ಸೇವಾ ಬಳಗ'ದ ವತಿಯಿಂದ ಸೋಮವಾರ ಜರುಗಿದ "ವಿಶ್ವ ಗ್ರಾಮೀಣಾಭಿವೃದ್ಧಿ ದಿನಾಚರಣೆ"ಯನ್ನು ಉದ್ಘಾಟಿಸಿ ಅವರು ಮಾತನಾಡಿದರು. ಸ್ಥಳೀಯ ಶ್ರೀ ವಿಶ್ವರಾಧ್ಯ ಶಿಕ್ಷಣ ಸಂಸ್ಥೆ'ಯ ಅಧ್ಯಕ್ಷ ದೇವೇಂದ್ರ ಬಿ.ತಳವಾರ ಮಾತನಾಡಿ, ಗ್ರಾಮೀಣ ಪ್ರದೇಶಗಳಲ್ಲಿ ಎಲ್ಲಾ ಮೂಲಭೂತ ಸೌಕರ್ಯಗಳನ್ನು ಒದಗಿಸಿ ಅಭಿವೃದ್ಧಿಗೊಳಿಸುವುದು ಅಗತ್ಯವಾಗಿದೆ ಎಂದರು. ಕಾರ್ಯಕ್ರಮದಲ್ಲಿ ಗ್ರಾಮಸ್ಥರಾದ ಬಸವರಾಜ ಕುಸನೂರ, ಸಿದ್ದಪ್ಪ ದೊಡ್ಡಮನಿ, ಮಲ್ಲಣ್ಣ ಜೈನಾಪುರ, ದೀಪಲು ಪವಾರ್, ಶರಣು ಕೆರೂರ,ಅಂಬರೀಶ್ ತಳವಾರ, ಭಾಗ್ಯಶ್ರೀ, ಮೋನಿಕಾ ಸೇರಿದಂತೆ ಇನ್ನಿತರರಿದ್ದರು.



# ರಾಷ್ಟ್ರೀಯ ಏಕತೆ ಬಯಸಿದ ದೇಶ ಭಕ್ತ ಡಾ ಶ್ಯಾಮ ಪ್ರಸಾದ್ ಮುಖರ್ಜಿ: ಚಂದು ಪಾಟೀಲ್

ಕಲಬುರಗಿ :ಡಾ ಶ್ಯಾಮ ಪ್ರಸಾದ್ ಮುಖರ್ಜಿ ಅವರು ರಾಷ್ಟ್ರೀಯ ಏಕತೆ ಹಾಗೂ ಅಖಂಡತೆಯನ್ನು ಬಯಸಿದ್ದ ಒಬ್ಬ ಅಪ್ರತಿಮ ದೇಶಭಕ್ತರಾಗಿದ್ದರು ಎಂದು ಬಿಜೆಪಿ ಮಹಾನಗರ ಜಿಲ್ಲಾಧ್ಯಕ್ಷ ಚಂದು ಪಾಟೀಲ್ ಅಭಿಪ್ರಾಯಪಟ್ಟರು.

ನಗರದ ಬಿಜೆಪಿ ಕಚೇರಿಯಲ್ಲಿ ಆಯೋಜಿಸಿದ್ದ ಡಾ ಶ್ಯಾಮ ಪ್ರಸಾದ್ ಮುಖರ್ಜಿ ಅವರ 125 ನೇ ಜನ್ಮದಿನದ ಅಂಗವಾಗಿ ನಡೆದ ಸ್ಮರಣ ಪಾಕ್ಷಿಕ ಕಾರ್ಯಕ್ರಮ ಉದ್ಘಾಟಿಸಿ ಮಾತನಾಡಿದರು.

ದೇಶದ ಪ್ರಗತಿ ಹಾಗೂ ಸಂಘಟನೆಯ ಬಲವರ್ಧನೆ ನಿಟ್ಟಿನಲ್ಲಿ ಸಮರ್ಪಿತರಾಗಿ ಕೆಲಸ ಮಾಡಲು ಡಾ ಶ್ಯಾಮ ಪ್ರಸಾದ್ ಮುಖರ್ಜಿ ಅವರ ಚಿಂತನೆಗಳು ಪಕ್ಷದ ಪ್ರತಿಯೊಬ್ಬ ಕಾರ್ಯಕರ್ತರಿಗೂ ಸದಾ ಸ್ಫೂರ್ತಿ ನೀಡುತ್ತವೆ ಎಂದು ಸ್ಮರಣ ಪಾಕ್ಷಿಕ ಕಾರ್ಯಕ್ರಮಗಳ ಜಿಲ್ಲಾ ಸಂಚಾಲಕ ಡಾ ಅಂಬಾರಾಯ ಅಷ್ಠಗಿ ಬಣ್ಣಿಸಿದರು. ಜಮ್ಮು ಮತ್ತು ಕಾಶ್ಮೀರವು ಭಾರತದ ಅವಿಭಾಜ್ಯಅಂಗವಾಗಿ ಉಳಿಯಬೇಕು ಹಾಗೂ ಭಾರತದ ಅಖಂಡತೆ ಮತ್ತು ಪ್ರಜಾಪ್ರಭುತ್ವದ ಮೌಲ್ಯಗಳನ್ನು ಕಾಪಾಡಬೇಕು ಎಂಬ ಉದ್ದೇಶಕ್ಕಾಗಿ ಡಾ. ಶ್ಯಾಮಪ್ರಸಾದ್ ಮುಖರ್ಜಿ ರವರು ತಮ್ಮ ಪ್ರಾಣವನ್ನೇ ತ್ಯಾಗ ಮಾಡಿದರು ಎಂದು ಮಾಜಿ ವಿಧಾನ ಪರಿಷತ್ ಸದಸ್ಯ ಅಮರನಾಥ ಪಾಟೀಲ್ ಹಾಗೂ ಕಲಬುರಗಿ ವಿಭಾಗೀಯ ಸಹ ಪ್ರಭಾರಿ ಶರಣಪ್ಪ ತಳವಾರ ಹೇಳಿದರು

ಇದೇ ವೇಳೆ ಮಾಜಿ ಪ್ರಧಾನಿ ಡಾ ಬಾಬು ಜಗಜೀವನ ರಾಮ ಅವರ ಪುಣ್ಯತಿಥಿ ಅಂಗವಾಗಿ ಅವರ ಭಾವಚಿತ್ರಕ್ಕೆ ಮಾಲಾರ್ಪಣೆ ಮಾಡಿ ಅವರು ದೇಶಕ್ಕೆ ನೀಡಿದ ಕೊಡುಗೆ ಕುರಿತು ಪಕ್ಷದ ಪ್ರಮುಖರು ಮಾತನಾಡಿದರು.

ಈ ಸಂದರ್ಭದಲ್ಲಿ , ಮಹಾನಗರ ಜಿಲ್ಲಾಧ್ಯಕ್ಷ, ಚಂದು ಪಾಟೀಲ್, ಮಾಜಿ ಸದಸ್ಯ ಅಮರನಾಥ ಪಾಟೀಲ್, ಬಿಜೆಪಿ ಕಲಬುರಗಿ ವಿಭಾಗೀಯ ಸಹ ಪ್ರಭಾರಿ ಶರಣಪ್ಪ ತಳವಾರ, ಬಿಜೆಪಿ ಕಲಬುರಗಿ ಜಿಲ್ಲಾ (ಗ್ರಾಮಾಂತರ) ಪ್ರಧಾನ ಕಾರ್ಯದರ್ಶಿ ಲಿಂಗರಾಜ ಬಿರಾದಾರ, ಸ್ಮರಣ ಪಾಕ್ಷಿಕ ಕಾರ್ಯಕ್ರಮಗಳ ಬಿಜೆಪಿ ಜಿಲ್ಲಾ (ಗ್ರಾಮಾಂತರ) ಸಂಚಾಲಕ ಡಾ ಅಂಬಾರಾಯ ಅಷ್ಠಗಿ, ಮಹಾನಗರ ಜಿಲ್ಲಾ ಸಂಚಾಲಕ ಸುಂದರ್ ಕುಲಕರ್ಣಿ, ಸಹ ಸಂಚಾಲಕರಾದ ಭಾಗಿರಥಿ ಗುನ್ನಾಪೂರ, ಸುಂದರ್ ಸಾಗರ, ಮಲ್ಲಣ್ಣ ಕುಲಕರ್ಣಿ, ಪ್ರಮುಖರಾದ ಅಪ್ಪು ಕಣಕಿ, ಧರ್ಮಣ್ಣ ಇಟಗಾ, ನಂದಾ ಬಾಬಾ, ಉಮೇಶ್ ಪಾಟೀಲ್, ಶಿವಯೋಗಿ ನಾಗನಳ್ಳಿ, ಎಸ್ ಜಿ ಭಾರತಿ, ಮಲ್ಲಿಕಾರ್ಜುನ ಜಿನಕೇರಿ, ಸಚೀನ ಕಡಗಂಚಿ, ಗಿರೀಶ್ ಭಜಂತ್ರಿ, ಬಸವರಾಜ ಮಾಲಿ ಬಿರಾದಾರ, ಸೇರಿದಂತೆ ಪಕ್ಷದ ಪದಾಧಿಕಾರಿಗಳು,ಮುಖಂಡರು ಹಾಗೂ ಕಾರ್ಯಕರ್ತರು ಉಪಸ್ಥಿತರಿದ್ದರು.

ಕಾರ್ಯಕ್ರಮವನ್ನು ಸಹ ಸಂಚಾಲಕಿ ಭಾಗಿರಥಿ ಗುನ್ನಾಪುರ ಸ್ವಾಗತಿಸಿದರು, ಸುಂದರ್ ಸಾಗರ ನಿರುಪಿಸಿದರು. ಮಲ್ಲಿಕಾರ್ಜುನ ಜಿನಕೇರಿ ವಂದನಾರ್ಪಣೆ ಮಾಡಿದರು.



# ಸಹಕಾರ ಸಪ್ತಾಹ ಕಾರ್ಯಕ್ರಮದ ಅಂಗವಾಗಿಯಶಸ್ವಿನಿ ಕಾರ್ಡ್ ವಿತರಣೆ

ಕಲಬುರಗಿ: ಕೇಂದ್ರ ಸರ್ಕಾರದ ಸಹಕಾರ ಸಚಿವಾಲಯ ಪ್ರಾರಂಭಗೊಂಡು ಐದು ವರ್ಷ ಪೂರೈಸುತ್ತಿರುವ ಹಿನ್ನೆಲೆಯಲ್ಲಿ ಹಾಗೂ 'ಸಹಕಾರ ಸಪ್ತಾಹ ಕಾರ್ಯಕ್ರಮದ ಅಂಗವಾಗಿ ಚಿತ್ತಾಪುರ ತಾಲೂಕಿನ ಹೆಬ್ಬಾಳ ಪ್ರಾಥಮಿಕ ಕೃಷಿ ಪತ್ತಿನ ಸಹಕಾರ ಸಂಘ ನಿಯಮಿತದಲ್ಲಿ ಸೋಮವಾರ (ದಿನಾಂಕ: 06-07-2026 ರಂದು) ಯಶಸ್ವಿನಿ ಕಾರ್ಡ್ ವಿತರಿಸುವ ಕುರಿತು ಕಾರ್ಯಕ್ರಮವನ್ನು ಹಮ್ಮಿಕೊಳ್ಳಲಾಯಿತು.

ಕಾರ್ಯಕ್ರಮದಲ್ಲಿ ಸಂಘದ ನಿರ್ದೇಶಕ ಅಣವೀರಪ್ಪ, ಗ್ರಾಮ ಪಂಚಾಯತಿಯ ಅಧ್ಯಕ್ಷ ಸುನಿಲ್ ವಟಾವಟಿ, ಮಾಜಿ ಗ್ರಾಮ್ ಪಂಚಾಯಿತಿಯ ಅಧ್ಯಕ್ಷ ನಾಗರಾಜ್ ದಿವಟಗಿ ಹಾಗೂ ಸಂಘದ ಕಾರ್ಯದರ್ಶಿಗಳಾದ ರೇವಣಸಿದ್ದಪ್ಪ, ಜಿಲ್ಲಾ ಸಹಕಾರ ಒಕ್ಕೂಟ ಸಿಬ್ಬಂದಿ ವರ್ಗದವರು ಮತ್ತು ಜಿಲ್ಲೆಯ ಪ್ರಾಥಮಿಕ ಕೃಷಿ ಪತ್ತಿನ ಸಹಕಾರ ಸಂಘದ ಸಿಬ್ಬಂದಿ ವರ್ಗದವರು ಪಾಲ್ಗೊಂಡಿದರು.

# ಹಿಂದಿನ ಸಾಧನೆ ತಲೆಗೇರಿಸಿಕೊಂಡು ಅದರ ಬಗ್ಗೆಯೇ ಗರ್ವ ಬೇಡ

■ **ಉದಯರಶ್ಮಿ ದಿನಪತ್ರಿಕೆ**

## ಮನದಂಗಳ



ಒಂದು ಬೇಸಿಗೆಯ ಮಧ್ಯಾಹ್ನದ ವೇಳೆಗೆ ಹೆಬ್ಬುಲಿಯೊಂದು ಕಾಡು ಕೋಣವೊಂದನ್ನು ಭರ್ಜರಿ ಬೇಟೆಯಾಡಿ, ಹೊಟ್ಟೆ ತುಂಬುವಷ್ಟು ತಿಂದು ಮರವೊಂದರ ನೆರಳಿನಲ್ಲಿ ಹಾಯಾಗಿ ಮಲಗಿತ್ತು. ಆಗ ಹೆಬ್ಬುಲಿಯ ಕಿವಿಯ ಬಳಿ ನೊಣವೊಂದು ಗುಯ್ ಎನ್ನುತ್ತಾ ಹಾರಾಡತೊಡಗಿದಾಗ ಹುಲಿಗೆ ಎಚ್ಚರವಾಯಿತು. ಚೆನ್ನಾಗಿ ನಿದ್ರೆ ಮಾಡುತ್ತಿದ್ದ ಹುಲಿಗೆ ಇದರಿಂದ ಬಹಳ ಕೋಪ ಬಂತು. ನೊಣವನ್ನು ಓಡಿಸಲು ತನ್ನ ಮುಖ ಮತ್ತು ದೇಹವನ್ನು ಪಟಪಟನೇ ಕೊಡವಿತು. ಆಗ ಆ ನೊಣವು ಮೇಲಕ್ಕೆ ಹಾರಿ ಗರಗರನೇ ಸುತ್ತಿ ಬಂದು ಹುಲಿಯನ್ನು ಕೆರಳಿಸುವಂತೆ ಅದರ ಮೂಗಿನ ಮೇಲೆ ಕುಳಿತುಕೊಂಡಿತು. ನೊಣದ ಉದ್ಧಟತನವನ್ನು ಕಂಡ ಹೆಬ್ಬುಲಿಯ ಸಿಟ್ಟು ಹೆಚ್ಚಾಗಿ ತನ್ನ ಬಲಗಾಲನ್ನೆತ್ತಿ ನೊಣಕ್ಕೆ ಹೊಡೆಯಲು ಪ್ರಯತ್ನಿಸಿತು.



ಆದರೆ ಜಾಣ ನೊಣವು ಅಲ್ಲಿಂದ ಪಾರಾಗಿ ಮೇಲಕ್ಕೆ ಹಾರಿದಾಗ ಹುಲಿಯ ಕಾಲು ಅದರ ಮುಖಕ್ಕೇ ಅಪ್ಪಳಿಸಿ ಅತಿಯಾದ ನೋವಾಯಿತು, ಹುಲಿಯ ಕಣ್ಣಲ್ಲಿ ನೀರು ಬಂದಿತು. ಇದನ್ನು ನೋಡಿದ ನೊಣವು ಗಹಗಹಿಸಿ ನಗುತ್ತಾ, 'ನೀನ್ಯಾವ ಸೀಮೆಯ ರಾಜನಯ್ಯ? ನನ್ನಂಥ ಸಣ್ಣ ನೊಣವನ್ನು ಹಿಡಿಯಲೂ ನಿನ್ನಿಂದಾಗದು' ಎಂದಿತು.

ಈಗ ಹುಲಿಯು ಎದ್ದು ನಿಂತು ನೊಣದೊಂದಿಗೆ ಹೋರಾಟಕ್ಕೆ ಮುಂದಾಯಿತು.

ನೊಣಕ್ಕೂ ಈ ರೀತಿಯ ಯುದ್ಧ ಖುಷಿಯೆನಿಸಿ ಹುಲಿಯ ತಲೆಯನ್ನು ಸುತ್ತುತ್ತಾ, ಕ್ಷಣಮಾತ್ರದಲ್ಲಿ ಅದರ ಕಣ್ಣಿನ ಹತ್ತಿರ ಬಂದು, ಮತ್ತೆ ಅದರ ಕಿವಿಯೊಳಗೆ ಹೋಗಿ, ಮತ್ತೆ ಹೊರಬಂದು ಹುಲಿಯ ಬಾಯಿಯ ಹತ್ತಿರವೇ ಬಂದಿತು. ಅದನ್ನು ಕಚ್ಚಿ ಬಿಡಬೇಕೆಂದು ಸಿಂಹ ಬಾಯ್ತೆರೆದು ಮುನ್ನುಗ್ಗಿದಾಗ, ಮುಂದಿದ್ದ ಮರಕ್ಕೆ ಹುಲಿಯ ಮುಖವು ಜೋರಾಗಿ ಬಡಿದು ಹುಲಿ ಕುಸಿತು ಬಿತ್ತು. ನೆಲಕ್ಕೆ ಉರುಳಿದ ಹುಲಿಯನ್ನು ನೋಡಿ ನೊಣಕ್ಕೆ ಬಹಳ ಖುಷಿಯಾಯಿತು. ಹ್ಹ.. ಹ್ಹ.ಹಹ್ಹ ಕಾಡಿನ ರಾಜ ಹುಲಿರಾಯ ನೆಲಕ್ಕುರುಳಿ ಹೊರಳಾಡುತ್ತಿದ್ದಾನೆ.

ಒಂದು ನೊಣದಿಂದ ತಪ್ಪಿಸಿಕೊಳ್ಳುವುದು ನಿನ್ನಿಂದ ಸಾಧ್ಯವಿಲ್ಲ. ನನ್ನ ಶಕ್ತಿ ಎಂಥದ್ದು ಎಂದು ನಿನಗೆ ತಿಳಿಯಿತೇ? ಎಷ್ಟು ದೊಡ್ಡದಾದ ದೇಹವನ್ನು ನೀನು ಹೊಂದಿದ್ದರೂ ನಿನ್ನ ಕಾಲಿನಲ್ಲಿ ಶಕ್ತಿಯಿಲ್ಲ, ನಿನ್ನ ಅಬ್ಬರದ ಘರ್ಜನೆಯನ್ನು ಕೇಳಿ ದೊಡ್ಡ ದೊಡ್ಡ ಪ್ರಾಣಿಗಳೂ ಹೆದರುತ್ತವಂತೆ, ಅವೆಷ್ಟು ಹೇಡಿಗಳಿರಬೇಕು? ನಿನ್ನ ಶಕ್ತಿಯು ನನ್ನ ಪುಟ್ಟ ರೆಕ್ಕೆಗಳಿಗೂ ಸಮವಲ್ಲ. ನಿನ್ನಂಥ ಹತ್ತಾರು ಹೆಬ್ಬುಲಿಗಳನ್ನು ನಾನು ಕ್ಷಣ ಮಾತ್ರದಲ್ಲಿ ಸೋಲಿಸಬಲ್ಲೆ' ಎಂದೆಲ್ಲಾ ನೊಣವು ಬಡಾಯಿಯ ಮಾತನ್ನು ಆಡತೊಡಗಿತು.

ನೊಣದ ಬಡಾಯಿಯನ್ನು ಮರದ ಮೇಲಿಂದ ಗಮನಿಸುತ್ತಿದ್ದ ಗಿಳಿಯೊಂದು ನೊಣದ ಹತ್ತಿರಕ್ಕೆ ಹಾರಿ ಬಂದು, 'ಗೆಳೆಯಾ, ನಿನ್ನ ಶಕ್ತಿಯು ನಿಜವಾಗಿಯೂ ಅದ್ಭುತವೇ. ಆದರೆ, ನನ್ನೊಂದಿಗೆ ಈ ಮರದ ಮೇಲಿನ ಕೊಂಬೆಯವರೆಗೆ ಬರಬಲ್ಲೆಯಾ' ಎಂದು ಕೇಳಿತು. ಆಗಷ್ಟೇ ಹುಲಿಯನ್ನು ಸೋಲಿಸಿದ್ದ ಅಮಲಿನಲ್ಲಿದ್ದ ನೊಣವು ಅದೇ ಅಹಂಕಾರದಿಂದ ಗಿಳಿಯೊಂದಿಗೆ ಹಾರಿ, ಅದನ್ನೇ ಹಿಂಬಾಲಿಸಿಕೊಂಡು ಹಾರತೊಡಗಿತು.

ಗಿಳಿ ಮೇಲೆ ಹಾರುತ್ತಿದ್ದಂತೆ ನೊಣವೂ ಸಹಿತ ಅದನ್ನು ಹಿಂಬಾಲಿಸಿತು. ಗಿಳಿಯು ಹಾರುತ್ತಾ ಕೂಡಲೇ ಬದಿಗೆ ಸರಿಯಿತು. ಗಿಳಿಯ ಹಿಂದೆಯೇ ಸಾಗುತ್ತಿದ್ದ ನೊಣವು ಇದನ್ನು ಗಮನಿಸದೇ ಮುನ್ನುಗ್ಗಿದಾಗ ಅಲ್ಲಿ ಹರಡಿಕೊಂಡಿದ್ದ ಜೇಡರ ಬಲೆಯೊಳಗೆ ಸಿಕ್ಕಿಕೊಂಡಿತು. ಏನೇ ಮಾಡಿದರೂ, ಎಷ್ಟೇ ಒದ್ದಾಟ ಮಾಡಿದರೂ ಬಲೆಯಿಂದ ಬಿಡಿಸಿಕೊಳ್ಳಲು ಆಗಲಿಲ್ಲ. ಅಷ್ಟರಲ್ಲಿ ಜೇಡರ ಹುಳವು ತನ್ನ ಬಲೆಯನ್ನು ಮತ್ತಷ್ಟು ಬಿಗಿದು ನೊಣದ ಪ್ರಾಣವನ್ನು ಹೀರಲು ಆರಂಭಿಸಿತು. ಆಗ ಗಿಳಿಯು 'ಅಯ್ಯಾ, ಕಾಡಿನ ರಾಜ ಹುಲಿಯನ್ನು ಸೋಲಿಸಿದೆ ಎಂದು ಬೀಗುತ್ತಿದ್ದ ನೀನು ಈ ಪುಟ್ಟ ಬಲೆಯಿಂದ ಮತ್ತು ಜೇಡರ ಹುಳದಿಂದ ತಪ್ಪಿಸಿಕೊಳ್ಳಲಾರೆ. ಇನ್ನು ನಿನ್ನ ಅಹಂಕಾರಕ್ಕೆ ಅವಕಾಶವೇ ಇಲ್ಲ' ಎಂದು ಹೇಳಿ ಅಲ್ಲಿಂದ ಹಾರಿ ಹೋಯಿತು.

ಯಾವುದೋ ಪುಣ್ಯದ ಫಲದಿಂದ ಮತ್ತು ಇತರರ ಸಹಕಾರದಿಂದ ಕೆಲವೊಮ್ಮೆ ದೊಡ್ಡ ಸಾಧನೆಗಳು ನಮ್ಮಿಂದ ಮೂಡಿ ಬರುತ್ತವೆ. ಅದೇ



ರೀತಿ ಇತರರ ಮತ್ತು ಸಾಧಕರ ಸಾಧನೆಯನ್ನು ಸರಿಗಟ್ಟುವ ಅವಕಾಶಗಳೂ ನಮಗೆ ಬರುತ್ತವೆ. ಅಂತಹ ಸಾಧನೆಯು ನಮ್ಮಿಂದ ಮೂಡಿ ಬಂದಾಗ ಆ ಅಹಂ ನಮ್ಮ ತಲೆಗೆ ಏರಬಾರದು. ಪ್ರತಿ ಬಾರಿಯೂ ಉತ್ಕೃಷ್ಟ ಮಟ್ಟದ ಸಾಧನೆಯನ್ನು ಮಾಡಲು ಸಾಧ್ಯವಾಗದೇ ಇರಬಹುದು. ಅದಕ್ಕಾಗಿ ಈ ಹಿಂದಿನ ಸಾಧನೆಯನ್ನೇ ತಲೆಗೆ ಏರಿಸಿಕೊಂಡು ಅದರ ಬಗ್ಗೆ ಗರ್ವಪಡುತ್ತಿದ್ದರೆ ಒಂದಲ್ಲ ಒಂದು ದಿನ ತೀರ ಸಣ್ಣವರಿಂದ ಮತ್ತು ಅಶಕ್ತರಿಂದ ಸೋಲು ಎದುರಾಗಿ ಮುಖಭಂಗಕ್ಕೆ ಈಡಾಗಬೇಕಾಗುತ್ತದೆ. ಮತ್ತು ಅದಕ್ಕೆ ಖುದ್ದು ನಾವೇ ಜವಾಬ್ದಾರರು ಆಗುತ್ತೇವೆ. ಸಾಧನೆಯ 100% ಪಾಲನ್ನು ಎಲ್ಲರಿಗೂ ಹಂಚುವವನು ಸದಾ ಗೆಲ್ಲಬಲ್ಲ.ಸೊಗಡನ್ನು ಪ್ರತಿಬಿಂಬಿಸುವ ಕಲೆಯನ್ನು ಎಂದಿಗೂ ಮರೆಯಬಾರದು.

ಲೇಖನ
ಸಂತೋಷ್ ರಾವ್
ಪೆರ್ಮುಡ.
ಪಟ್ರಮೆ ಗ್ರಾಮ ಮತ್ತು
ಅಂಚೆ
ಬೆಳ್ತಂಗಡಿ ತಾಲೂಕು
ದ.ಕ ಜಿಲ್ಲೆ-574198
ದೂ: 9742884160



# ರಾಜ್ಯದ ಪರಿಸ್ಥಿತಿ ಅವಲೋಕಿಸಿ ಬರಗಾಲ ಪೀಡಿತ ಪ್ರದೇಶ ಘೋಷಣೆ: ಸಿಎಂ ಡಿ ಕೆ ಶಿವಕುಮಾರ್



ಕಲಬುರ್ಗಿ:"ಬರಗಾಲ ಪೀಡಿತ ಪ್ರದೇಶ ಎಂದು ಘೋಷಣೆ ಮಾಡಲು ಕಾನೂನು ಚೌಕಟ್ಟಿದೆ. ರಾಜ್ಯದ ಎಲ್ಲಾ ಭಾಗಗಳ ಪರಿಸ್ಥಿತಿ ಪರಿಶೀಲಿಸಿ ನಂತರ ಘೋಷಣೆ ಮಾಡಲಾಗುವುದು" ಎಂದು ಸಿಎಂ ಡಿ ಕೆ ಶಿವಕುಮಾರ್ ಅವರು ಹೇಳಿದರು.

ಕಲಬುರಗಿ ಸರ್ಕಾರಿ ಅತಿಥಿ ಗೃಹದ ಆವರಣದಲ್ಲಿ ಮಾಧ್ಯಮಗಳ ಪ್ರಶ್ನೆಗಳಿಗೆ ಶಿವಕುಮಾರ್ ಅವರು ಮಂಗಳವಾರ ಉತ್ತರಿಸಿದರು.ಬರಗಾಲಕ್ಕೆ ಸಿಲುಕಿರುವ ಕಲ್ಯಾಣ ಕರ್ನಾಟಕದ ಭಾಗಕ್ಕೆ ಸರಕಾರದ ಕೊಡುಗೆ ಏನು ಎಂದು ಕೇಳಿದಾಗ, "ನಾನು ಬರಗಾಲ ಪರಿಸ್ಥಿತಿ ಅವಲೋಕಿಸಲು ಕಲ್ಯಾಣ ಕರ್ನಾಟಕ ಭಾಗಕ್ಕೆ ಬಂದಿದ್ದೇನೆ. ಇಲ್ಲಿನ ಜನರು ಮತ್ತು ಜನಪ್ರತಿನಿಧಿಗಳನ್ನು ಭೇಟಿ ಮಾಡಿದ್ದೇನೆ. ಇಲ್ಲಿನ ಪರಿಸ್ಥಿತಿಯ ಅವಲೋಕನಕ್ಕೆ ಸಭೆ ನಡೆಸುತ್ತಿದ್ದೇನೆ. ಅದೇ ರೀತಿ ಎರಡು ಮೂರು ದಿನ ಬಿಟ್ಟು ಬೆಳಗಾವಿಗೂ ಭೇಟಿ ನೀಡುತ್ತಿದ್ದೇನೆ" ಎಂದರು. "ಸಮಸ್ಯೆ ಬಗೆಹರಿಸಬೇಕು ಎಂದು ಜನರು ಬೇಡಿಕೆಗಳನ್ನು ಮಂಡಿಸಿದ್ದಾರೆ. ಅವರ ಸಮಸ್ಯೆ ಆಲಿಸಲು ಹೊಸದಾಗಿ ಪ್ರಜಾಸೇವಾ ಇಲಾಖೆ ಸ್ಥಾಪಿಸಿ, ಸಚಿವರನ್ನು ನೇಮಕ ಮಾಡಿ, ಜನರ ಅರ್ಜಿಗಳನ್ನು ಪರಿಶೀಲಿಸಿ ಅವರಿಗೆ ಸಾಧ್ಯವಾದಷ್ಟು ನ್ಯಾಯ ಒದಗಿಸುವ ಕೆಲಸವನ್ನು ಸರ್ಕಾರ ಮಾಡುತ್ತದೆ" ಎಂದರು. ಇದಕ್ಕೂ ಮೊದಲು ಮುಖ್ಯಮಂತ್ರಿಯವರು ಕಲಬುರ್ಗಿ ಸರಕಾರಿ ಅತಿಥಿ ಗೃಹದ ಆವರಣದಲ್ಲಿ ಸಾರ್ವಜನಿಕರಿಂದ ಅಹವಾಲುಗಳನ್ನು ಸ್ವೀಕರಿಸಿದರು. ಇದೇ ಸಂದರ್ಭದಲ್ಲಿ ರೈತರು ಕಬ್ಬಿನ ಜಲ್ಲೆ ಜತೆಗೆ ತಮ್ಮ ಅಹವಾಲುಗಳನ್ನು ನೀಡಿದರು. ಮಳೆ ಕೊರತೆ ಉಂಟಾಗಿದೆ, ಬರಗಾಲ ಪೀಡಿತ ಎಂದು ಘೋಷಣೆ ಮಾಡಿ ಎಂದು ರೈತರು ಮನವಿ ಮಾಡಿದರು. "ಈ ಪರಿಸ್ಥಿತಿಯನ್ನು ಕಣ್ಣಾರೆ ನೋಡಲೆಂದೇ ನಾನು ಇಲ್ಲಿಗೆ ಬಂದಿದ್ದೇನೆ. ನಿಮ್ಮ ಪರಿಸ್ಥಿತಿ ನನಗೆ ಅರ್ಥವಾಗುತ್ತದೆ" ಎಂದರು.

ರೈತರ ಸಾಲ ಮನ್ನಾ ವಿಚಾರ ಹಾಗೂ ತಮಿಳುನಾಡು, ಮಹಾರಾಷ್ಟ್ರಗಳಲ್ಲಿ ರೈತರ ಸಾಲ ಮನ್ನಾ ಮಾಡಿರುವ ಬಗ್ಗೆ ಕೇಳಿದಾಗ, "ಎಲ್ಲಿಯ ಸಾಲ, ಯಾವ ಸಾಲ ಎಂಬುದನ್ನು ಪರಿಶೀಲನೆ ಮಾಡೋಣ" ಎಂದರು.

# ಬಿಲ್ ಕಲೆಕ್ಟರ್ ಲೋಕಾಯುಕ್ತ ಬಲೆಗೆ



ಕಲಬುರಗಿ:ಡಾ.ಬಿ.ಆರ್. ಅಂಬೇಡ್ಕರ್ ನಿವಾಸ ಯೋಜನೆಯ ಅನುದಾನ ಬಿಡುಗಡೆ ಮಾಡಲು ಲಂಚಕ್ಕೆ ಬೇಡಿಕೆ ಇಟ್ಟು, ಫೋನ್‌ಪೇ ಮೂಲಕ 15 ಸಾವಿರ ರೂ. ಲಂಚ ಸ್ವೀಕರಿಸುತ್ತಿದ್ದ ಕರದಾಳ ಗ್ರಾಮ ಪಂಚ

ಪಂಚಾಯಿತಿಯ ಬಿಲ್ ಕಲೆಕ್ಟರನ್ನು ಕರ್ನಾಟಕ ಲೋಕಾಯುಕ್ತ ಅಧಿಕಾರಿಗಳು ಬಲೆಗೆ ಬೀಳಿಸಿ ಬಂಧಿಸಿದ್ದಾರೆ. ಚಿತ್ತಾಪುರ ತಾಲೂಕಿನ ಕರದಾಳ ಗ್ರಾಮ ಪಂಚಾಯಿತಿಯ ಕರ ವಸೂಲಿಗಾರ (ಬಿಲ್ ಕಲೆಕ್ಟರ್) ಸಂತೋಷ ರಾಠೋಡ ಬಂಧಿತ ಆರೋಪಿ.ಹನಿಕೆರಾ ಗ್ರಾಮದ ರಾಮನಾಯಕ ತಾಂಡಾದ ನಿವಾಸಿ ಸಿಖಂದರ್ ನೀಡಿದ ದೂರಿನ ಮೇರೆಗೆ ಲೋಕಾಯುಕ್ತ ಅಧಿಕಾರಿಗಳು ಕಾರ್ಯಾಚರಣೆ ನಡೆಸಿದ್ದಾರೆ.

ದೂರಿನ ಪ್ರಕಾರ, ಸಿಖಂದರ್ ಅವರ ಅಕ್ಕ ಸವಿತಾ ಅವರಿಗೆ ಡಾ.ಬಿ.ಆರ್.ಅಂಬೇಡ್ಕರ್ ನಿವಾಸ ಯೋಜನೆಯಡಿ ಮಂಜೂರಾಗಿದ್ದ ಮೂರನೇ ಹಾಗೂ ನಾಲ್ಕನೇ ಕಂತಿನ ಅನುದಾನ ಬಿಡುಗಡೆ ಮಾಡಲು ಆರೋಪಿ 22 ಸಾವಿರ ರೂ. ಲಂಚಕ್ಕೆ ಬೇಡಿಕೆ ಇಟ್ಟಿದ್ದ. ಬಳಿಕ ಮೊದಲ ಕಂತಾಗಿ ಫೋನ್‌ಪೇ ಮೂಲಕ 15 ಸಾವಿರ ರೂ. ಸ್ವೀಕರಿಸುತ್ತಿದ್ದ ವೇಳೆ ಲೋಕಾಯುಕ್ತ ಅಧಿಕಾರಿಗಳು ದಾಳಿ ನಡೆಸಿ ಆರೋಪಿಯನ್ನು ಬಂದಿಸಿದ್ದಾರೆ. ಈ ಕಾರ್ಯಾಚರಣೆಯನ್ನು ಲೋಕಾಯುಕ್ತ ಕಲಬುರಗಿ ಪೊಲೀಸ್ ಅಧೀಕ್ಷಕ ಸಿದ್ದರಾಜು ಸಿ. ಅವರ ಮಾರ್ಗದರ್ಶನದಲ್ಲಿ, ಲೋಕಾಯುಕ್ತ ಪೊಲೀಸ್ ಇನ್ಸಪೆಕ್ಟರ್ ರಾಜಶೇಖರ ಬಡದೇಸಾರ ಅವರ ನೇತೃತ್ವದಲ್ಲಿ ನಡೆಸಲಾಯಿತು. ಬಂಧಿತ ಆರೋಪಿಯನ್ನು ವಿಚಾರಣೆ ಬಳಿಕ ನ್ಯಾಯಾಲಯಕ್ಕೆ ಹಾಜರುಪಡಿಸಿ ನ್ಯಾಯಾಂಗ ಬಂಧನಕ್ಕೆ ಒಪ್ಪಿಸಲಾಗುವುದು ಎಂದು ಲೋಕಾಯುಕ್ತ ಅಧಿಕಾರಿಗಳು ತಿಳಿಸಿದ್ದಾರೆ.

# ರಸಗೊಬ್ಬರ ಖರೀದಿಗೆ ಹೋದ ವ್ಯಕ್ತಿ ಕೊಲೆ ಪ್ರಕರಣ: ನಾಲ್ವರ ಬಂಧನ



ಕಲಬುರಗಿ: ರಸಗೊಬ್ಬರ ಖರೀದಿಸಲು ಕಲಬುರಗಿ ನಗರಕ್ಕೆ ತೆರಳಿದ್ದ ವ್ಯಕ್ತಿಯೊಬ್ಬರು ಬಳಿಕ ಶವವಾಗಿ ಪತ್ತೆಯಾಗಿದ್ದ ಪ್ರಕರಣವು ಇದೀಗ ಕೊಲೆ ಪ್ರಕರಣವೆಂದು ಬಹಿರಂಗವಾಗಿದ್ದು, ಘಟನೆಗೆ ಸಂಬಂಧಿಸಿದಂತೆ ನಾಲ್ವರನ್ನು ಪೊಲೀಸರು ಬಂಧಿಸಿದ್ದಾರೆ.

ಅಫಜಲಪುರ ತಾಲೂಕಿನ ಹಾವನೂರು ಗ್ರಾಮದ ಶಿವಕುಮಾರ್ ಹೊಸಮನಿ (35) ಕೊಲೆಯಾದ ವ್ಯಕ್ತಿ. ಪ್ರಕರಣದ ತನಿಖೆ ನಡೆಸಿದ ಪೊಲೀಸರು ಬಿದ್ದಾಪುರ ಕಾಲೋನಿಯ ಸಚಿನ್ ಅಲಿಯಾಸ್ ಪ್ರವೀಣಕುಮಾರ್ ಹೂಗಾರ, ಚನ್ನಪ್ಪ ಸೈದಪ್ಪ ಬಬಲಾದ, ಸಚಿನ್ ನಾಗಣ್ಣ ಸುಲ್ತಾನಪುರ ಹಾಗೂ ಶರಣಸಿರಸಗಿ ಗ್ರಾಮದ ಶಿವಕುಮಾರ್ ಹೊಳೆ ಎಂಬಾತರನ್ನು ಬಂಧಿಸಿದ್ದಾರೆ. ಪ್ರಕರಣದಲ್ಲಿ ಭಾಗಿಯಾಗಿರುವ ಇನ್ನೊಬ್ಬ ಆರೋಪಿಗಾಗಿ ಶೋಧ ಕಾರ್ಯ ಮುಂದುವರಿದಿದೆ ಎಂದು ಪೊಲೀಸರು ತಿಳಿಸಿದ್ದಾರೆ.

ಬ್ಯಾನರ್ ಹರಿದಿದ್ದೇ ಕೊಲೆಗೆ ಕಾರಣ

ಶಿವಕುಮಾರ್ ಹೊಸಮನಿ ಅವರು ರಸಗೊಬ್ಬರ ತರಲು ಕಲಬುರಗಿಗೆ ತೆರಳಿದ್ದ ವೇಳೆ ನಾಪತ್ತೆಯಾಗಿದ್ದರು. ಬಳಿಕ ಅವರ ಶವ ಹಾವನೂರು ಗ್ರಾಮದ ಸಮೀಪ ಪತ್ತೆಯಾಗಿದ್ದು, ಪ್ರಕರಣ ಅನುಮಾನಕ್ಕೆ ಕಾರಣವಾಗಿತ್ತು. ಈ ಹಿನ್ನೆಲೆಯಲ್ಲಿ ಕುಟುಂಬಸ್ಥರು ಇದು ಕೊಲೆ ಎಂದು ಶಂಕಿಸಿ, ಸಮಗ್ರ ತನಿಖೆ ನಡೆಸಿ ಆರೋಪಿಗಳನ್ನು ಬಂಧಿಸುವಂತೆ ಒತ್ತಾಯಿಸಿದ್ದರು.

ಶಿವಕುಮಾರ್ ಕಾಣೆಯಾಗಿದ್ದ ವೇಳೆ ಅಶೋಕನಗರ ಪೊಲೀಸ್ ಠಾಣೆಯಲ್ಲಿ ನಾಪತ್ತೆ ಪ್ರಕರಣವೂ ದಾಖಲಾಗಿ-ತ್ತು. ನಂತರ ತನಿಖೆಯನ್ನು ಚುರುಕುಗೊಳಿಸಿದ ಪೊಲೀಸರು ಹಲವು ಸುಳಿವುಗಳ ಆಧಾರದ ಮೇಲೆ ಆರೋಪಿಗಳನ್ನು ವಶಕ್ಕೆ ಪಡೆದು ವಿಚಾರಣೆ ನಡೆಸಿದ್ದಾರೆ.ವಿಚಾರಣೆ ವೇಳೆ, ಬ್ಯಾನರ್ ಹರಿದಿದ್ದ ಹಳೆಯ ದ್ವೇಷದ ಹಿನ್ನೆಲೆಯಲ್ಲಿ ಶಿವಕುಮಾರ್ ಅವರನ್ನು ಹತ್ಯೆ ಮಾಡಿರುವುದಾಗಿ ಆರೋಪಿಗಳು ತಪ್ಪೊಪ್ಪಿಕೊಂಡಿದ್ದಾರೆ ಎಂದು ಪೊಲೀಸ್ ಮೂಲಗಳು ತಿಳಿಸಿವೆ.ಪ್ರಕರಣಕ್ಕೆ ಸಂಬಂಧಿಸಿದಂತೆ ಇನ್ನೊಬ್ಬ ಆರೋಪಿಯ ಬಂಧನಕ್ಕಾಗಿ ಪೊಲೀಸರು ಬಲೆ ಬೀಸಿದ್ದು, ತನಿಖೆ ಮುಂದುವರಿದಿದೆ.

# ಆಡಂಬರಕ್ಕೆ ಬ್ರೇಕ್, ಶಿಕ್ಷಣಕ್ಕೆ ಬೆಂಬಲ



ಕರಜಗಿ :ಅಫಜಲಪುರ ತಾಲೂಕಿನ ಉಡಚಾಣ ಗ್ರಾಮದಲ್ಲಿ ಗಿರೀಶ್ ಶರಣು ಪಡಶೆಟ್ಟಿ ಅವರ ಜನ್ಮದಿನ ಅಂಗವಾಗಿ 5 ಸಾವಿರ ಶಾಲಾ ವಿದ್ಯಾರ್ಥಿಗಳಿಗೆ ನೋಟ್ ಬುಕ್ ವಿತರಣೆ ಮಾಡಲಾಯಿತು.ಜನ್ಮದಿನ ಎಂದರೆ ಕೇವಲ ಕೇಕ್ ಕತ್ತರಿಸಿ,ದುಬಾರಿ ಪಾರ್ಟಿ ಮಾಡುವುದಷ್ಟೇ ಅಲ್ಲ,ಸಮಾಜ-ಕ್ಕೆ ಕೈಲಾದ ಸಹಾಯ ಮಾಡುವುದು ಎಂಬುದನ್ನು ತಾಪಂ ಮಾಜಿ ಅಧ್ಯಕ್ಷ ಗುರುಣ್ಣ ಪಡಶೆಟ್ಟಿ ಹಾಗೂ ಶರಣು ಪಡಶೆಟ್ಟಿ ಅವರು ಸಾಬೀತುಪಡಿಸಿದ್ದಾರೆ ಎಂದು ಜಿಪಂ ಮಾಜಿ ಅಧ್ಯಕ್ಷ ನಿತಿನ್ ಗುತ್ತೇದಾರ್ ಹೇಳಿದರು. ಅಫಜಲಪುರ ತಾಲೂಕಿನ ಉಡಚಾಣ ಗ್ರಾಮದಲ್ಲಿ ತಾಪಂ ಮಾಜಿ ಅಧ್ಯಕ್ಷ ಶರಣು ಪಡಶೆಟ್ಟಿ ಪುತ್ರನ ಜನ್ಮ ದಿನದ ಅಂಗವಾಗಿ ಹಮ್ಮಿಕೊಂಡಿದ್ದ ಶಾಲಾ ಮಕ್ಕಳಿಗೆ ಉಚಿತ ಪುಸ್ತಕ ವಿತರಣಾ ಕಾರ್ಯಕ್ರಮದಲ್ಲಿ ಭಾಗವಹಿಸಿ ಮಾತನಾಡಿದ ಅವರು,ಉಡ-'ಚಾಣ, ಶಿವೂರ, ಹಿರಿಯಾಳ ಗ್ರಾಮದ ಶಾಲಾ ಮಕ್ಕಳಿಗೆ 5 ಸಾವಿರ ನೋಟ್ ಬುಕ್ ವಿತರಣೆ ಮಾಡುತ್ತಿರುವುದು ಶ್ಲಾಘನೀಯವಾಗಿದೆ. ಇಂದಿನ ಯುಗದಲ್ಲಿ ಆಡಂಬರದಿಂದ ಜನ್ಮದಿನ ಆಚರಣೆ ಮಾಡಿಕೊಂಡು ಸಾವಿರಾರು ರೂ.ವ್ಯರ್ಥ ಮಾಡುತ್ತಿರುವ ಕಾಲಘಟ್ಟದಲ್ಲಿ ಬಡ ಮಕ್ಕಳಿಗೆ ನೋಟ್ ಬುಕ್ ವಿತರಣೆ ಮಾಡುವ ಸಂಕಲ್ಪವನ್ನು ಮಾಡಿ ಲಕ್ಷಾಂತರ ರೂ. ಖರ್ಚು ಮಾಡಿ ಇಂತಹ ಅದ್ಭುತವಾದ ಸಾಮಾಜಿಕ ಕಳಕಳಿ ಹೊಂದಿರುವ ಕಾರ್ಯಕ್ರಮ ಮಾಡಿರುವುದು ಇತರರಿಗೆ ಮಾದರಿಯಾಗಿದೆ ಎಂದರು. ಬಣಜಿಗ ಸಮಾಜದ ತಾಲೂಕಾಧ್ಯಕ್ಷ ಬಸಣ್ಣ ಗುಣಾರಿ ಮಾತನಾಡಿ,"ಇಂದಿನ ದಿನಗಳಲ್ಲಿ ಹುಟ್ಟುಹಬ್ಬವನ್ನು ತೋರ್ಪಡಿಕೆಗಾಗಿ ಆಚ-ರಿಸಿಕೊಳ್ಳುವವರೇ ಹೆಚ್ಚು. ಆದರೆ, ವಿವಿಧ ಶಾಲೆಯ ಬಡ ಮಕ್ಕಳ ಶಿಕ್ಷಣಕ್ಕೆ ನೆರವಾಗುವ ನಿಟ್ಟಿನಲ್ಲಿ ಉಚಿತ ನೋಟ್ ಬುಕ್ ವಿತರಣೆ ಮಾಡಿರುವುದು ಅತ್ಯಂತ ಶ್ಲಾಘನೀಯ ಕಾರ್ಯ. ಇಂತಹ ಸಮಾಜಮುಖಿ ಕಾರ್ಯಗಳು ಇತರರಿಗೂ ಪ್ರೇರಣೆಯಾಗಲಿ" ಎಂದು ಹಾರೈಸಿದರು.ತಾಪಂ ಮಾಜಿ ಅಧ್ಯಕ್ಷ ಶರಣು ಪಡಶೆಟ್ಟಿ ಮಾತನಾಡಿ,ಮಕ್ಕಳ ಮುಖದಲ್ಲಿನ ನಗು ನನ್ನ ಮಗನ ಜನ್ಮದಿನದ ಅತ್ಯುತ್ತಮ ಉಡುಗೊರೆ.ಶಿಕ್ಷಣಕ್ಕೆ ಪ್ರೋತ್ಸಾಹ ನೀಡುವ ಉದ್ದೇಶದಿಂದ ಈ ಸಣ್ಣ ಪ್ರಯತ್ನ ಮಾಡಿದ್ದೇನೆ. ಮುಂದಿನ ದಿನಗಳಲ್ಲೂ ಇಂತಹ ಜನಪರ ಕಾರ್ಯಗಳನ್ನು ಮುಂದುವರಿಸಲಾಗುವುದು" ಎಂದು ತಮ್ಮ ಸಂತಸ ಹಂಚಿಕೊಂಡರು. ಈ ಸಂದರ್ಭದಲ್ಲಿ ಬಿಜೆಪಿ ಮುಖಂಡರಾದ ರಮೇಶ್ ಬಾಕೆ,ಗುರು ಸಾಲಿಮಠ, ಬಸವರಾಜ ಬೂಶೆಟ್ಟಿ,ಮುರುಘೇಂದ್ರಮಸಳಿ,ಮಹಾಂತೇಶ ನೂಲಾ, ಸಂತೋಷ ದಾಮಾ,ಶರಣು ನೂಲಾ, ಸುಭಾಷ್ ಜೇವರ್ಗಿ,ಧಾನು ನೂಲಾ,ಧಾನು ಪತಾಟೆ, ಪ್ರಶಾಂತ್ ನೇಗಡಿ,ಭೀಮರಾಯಗೌಡ ಪಾಟೀಲ್,ಶರಣು ಮೇತ್ರಿ, ಉಮೇಶ್ ಮೋನಳ್ಳಿ ಸೇರಿದಂತೆ ಇನ್ನಿತರರು ಉಪಸ್ಥಿತ-ರಿದ್ದರು.

# ಸಾರ್ವಜನಿಕರ ಅಹವಾಲು ಆಲಿಸಿದ ಮುಖ್ಯಮಂತ್ರಿಗಳು



ಕಲಬುರಗಿ: ಕಲಬುರಗಿ ವಿಭಾಗ ಮಟ್ಟದ ಬರ ಪರಿಸ್ಥಿತಿ ಅವಲೋಕಿಸಲು ಜಿಲ್ಲೆಗೆ ಅಗಮಿಸಿರುವ ಮುಖ್ಯಮಂತ್ರಿ ಡಿ.ಕೆ.ಶಿವಕುಮಾರ ಅವರು ಮಂಗಳವಾರ ಇಲ್ಲಿನ ಐವಾನ್-ಎ-ಶಾಹಿ ಅತಿಥಿಗೃಹದಲ್ಲಿ ಸಾರ್ವಜನಿಕರು, ಸಂಘ ಸಂಸ್ಥೆಗಳ ನೂರಾರು ಪ್ರತಿನಿಧಿಗಳಿಂದ ಅಹವಾಲು ಆಲಿಸಿದರು.

ಜುಲೈ ತಿಂಗಳಲ್ಲಿಯೂ ಮಳೆ ಬರುವ ಯಾವುದೇ ಲಕ್ಷಣ ಕಾಣುತ್ತಿಲ್ಲ. ಕಲಬುರಗಿ ಜಿಲ್ಲೆಯನ್ನು ಬರಗಾಲ ಪೀಡಿತ ಪ್ರದೇಶವೆಂದು ಘೋಷಿಸಬೇಕು. ಕಳೆದ ವರ್ಷದ ಬಾಕಿ ಬೆಳೆ ವಿಮೆ ಮೊತ್ತ 300 ಕೋಟಿ ರೂ. ಕೂಡಲೆ ಬಿಡುಗಡೆ ಮಾಡಬೇಕೆಂದು ನವ ಕರ್ನಾಟಕ ರೈತ ಸಂಘದ ರಾಜ್ಯಾಧ್ಯಕ್ಷ ದಯಾನಂದ ಸಿ.ಪಾಟೀಲ ಮನವಿ ಮಾಡಿದರು.

ಎಸ್.ಟಿ ಸಮುದಾಯಕ್ಕೆ ಸೇರಿದ ತಳವಾರ, ನಾಯ್ಕಡ್ ವರ್ಗದ ವಿದ್ಯಾರ್ಥಿಗಳಿಗೆ ಕಳೆದ ಎರಡು ವರ್ಷಗಳಿಂದ ಜಾತಿ ಪ್ರಮಾಣ ಪತ್ರ ನೀಡುತ್ತಿಲ್ಲ, ಇದರಿಂದ ಸಮಾಜದ ಯುವಕರಿಗೆ ಉದ್ಯೋಗ, ಶಿಕ್ಷಣಕ್ಕೆ ತೊಂದರೆಯಾಗುತ್ತಿದೆ. ಕೂಡಲೆ ಸಮಸ್ಯೆ ಬಗೆಹರಿಸಬೇಕೆಂದರು.

ಬೆಳೆ ಸಾಲ ಮನ್ನಾ ಮಾಡಿ: ಕಳೆದ ವರ್ಷ ಅತಿವೃಷ್ಟಿಯಿಮದ ಹಸಿ ಬರಗಾಲ ಬಂದರೆ, ಈ ವರ್ಷ ಮಳೆ ಬಾರದೆ ಒಣ ಬರಗಾಲ ನೋಡುವ ಸ್ಥಿತಿ ನಮ್ಮ ರೈತಾಪಿ ವರ್ಗಕ್ಕೆ ಬಂದಿದೆ. ಕಲಬುರಗಿ ಜಿಲ್ಲೆಯಲ್ಲಿ ಅಲ್ಲಲ್ಲಿ ಅಲ್ಪಸ್ವಲ್ಪ ಮಳೆ ಬಿದ್ದ ಕಾರಣ ಇದೂವರೆಗೆ ಶೇ.30ರಷ್ಟು ಮಾತ್ರ ಬಿತ್ತನೆ ಮಾಡಲಾಗಿದೆ. ಬಿತ್ತನೆ ನಂತರ ಮಳೆ ಬರದ ಕಾರಣ ರೈತ ಕಂಗಾಲಾಗಿದ್ದಾನೆ. ಸಾಲ ಸೂಲ ಮಾಡಿ ಬೀಜ, ರಸಗೊಬ್ಬರ ಖರೀದಿ ಮಾಡಿದ್ದು, ಬೆಳೆ ಕೈಕೊಡುವ ಎಲ್ಲಾ ಲಕ್ಷಣ ಗೋಚರಿಸುತ್ತಿದೆ. ಹೀಗಾಗಿ ಸಹಕಾರಿ ಬ್ಯಾಂಕ್ ಮತ್ತು ರಾಷ್ಟ್ರೀಕೃತ ಬ್ಯಾಂಕ್ ಗಳಿಂದ ಸಾಲ ಪಡೆದ ರೈತರಿಗೆ ಸಾಲ ಮನ್ನಾ ಮಾಡಬೇಕೆಂದು ಸಿ.ಎಂ. ಅವರಿಗೆ ಮನವಿ ಪತ್ರ ಸಲ್ಲಿಸಿ ಜಿಲ್ಲಾ ಕೃಷಿಕ ಸಮಾಜದ ಜಿಲ್ಲಾಧ್ಯಕ್ಷ ಸಿದ್ರಾಮಪ್ಪ ಪಾಟೀಲ ಧಂಗಾಪೂರ ಆಗ್ರಹಿಸಿದರು.

ರಾಜ್ಯದ ಉಪಮುಖ್ಯಮಂತ್ರಿ, ಕಂದಾಯ ಮತ್ತು ಯುವಜನ ಸಬಲೀಕರಣ ಮತ್ತು ಕ್ರೀಡಾ ಸಚಿವ ಡಾ.ಜಿ.ರಮೇಶ್ವರ, ಗೃಹ, ಐ.ಟಿ-ಬಿ.ಟಿ ಹಾಗೂ ಇ-ಆಡಳಿತ ಎಚಿವ ಪ್ರಿಯಾಂಕ್ ಖರ್ಗೆ, ವೈದ್ಯಕೀಯ ಶಿಕ್ಷಣ, ಕೌಶಲ್ಯಾಭಿವೃದ್ಧಿ, ಉದ್ಯಮಶೀಲತೆ ಹಾಗೂ ಜೀವನೋಪಾಯ ಸಚಿವ ಡಾ.ಶರಣಪ್ರಕಾಶ ಪಾಟೀಲ, ಕೆ.ಕೆ.ಆರ್.ಡಿ.ಬಿ. ಅಧ್ಯಕ್ಷ ಡಾ.ಅಜಯ್ ಸಿಂಗ್, ಶಾಸಕ ರಾದ ಎಂ.ವೈ.ಪಾಟೀಲ, ಜಗದೇವ ಗುತ್ತೇದಾರ ಇದ್ದರು.


# ಸಚಿವ ಪ್ರಿಯಾಂಕ್ ಖರ್ಗೆ ರಾಜ್ಯದ ಜನರ ಧ್ವನಿಯಾಗಿ ಕೆಲಸ ಮಾಡುತ್ತಾರೆ ; ಕಮಲಾಕರ್ ಧನ್ನಿ



ಕಲಬುರಗಿ ; ಕರ್ನಾಟಕ ರಾಜ್ಯದ ಕಟ್ಟ ಕಡೆಯ ವ್ಯಕ್ತಿಗೂ ನ್ಯಾಯ ಒದಗಿಸುವುದರ ಮೂಲಕ ಗೃಹ ಸಚಿವ ಪ್ರಿಯಾಂಕ್ ಖರ್ಗೆ ಅವರು ಉತ್ತಮವಾಗಿ ಕಾರ್ಯನಿರ್ವಹಿಸಲ್ಲಿದ್ದಾರೆ ಎಂದು ಕೆಟಿಡಬ್ಲೂಓಟಿ ಜಿಲ್ಲಾದ್ಯಕ್ಷ ಕಮಲಾಕರ್ ಧನ್ನಿ ಹೇಳಿದರು.

ನೂತನವಾಗಿ ಗೃಹ ಸಚಿವರಾಗಿ ಮೊದಲ ಬಾರಿಗೆ ತವರು ಜಿಲ್ಲೆಗೆ ಆಗಮಿಸಿದ ಪ್ರಿಯಾಂಕ್ ಖರ್ಗೆ ಅವರನ್ನು ಭೇಟಿ ನೀಡಿ ಅಭಿನಂದನೆಗಳು ಸಲ್ಲಿಸಿ ಮಾತನಾಡಿದ ಅವರು, ಈ ಹಿಂದೆಯೂ ಪಕ್ಷದ ಹೈಕಮಾಂಡ್ ನೀಡಿರುವ ಪ್ರತಿಯೊಂದು ಜವಾಬ್ದಾರಿ ಬಹಳ ಪ್ರಮಾಣಿಕತೆಯಿಂದ ನಿಭಾಯಿಸುವ ದೇಶದ ನಂ. ಆರ್ಡಿಪಿಆರ್ ಮತ್ತು ಐಟಿಬಿಟಿ ಇಲಾಖೆಯ ಅಡಿಯಲ್ಲಿ ಬದಲಾವಣೆ ಮಾಡುವ ಮೂಲಕ ದೇಶದ ನಂ. ಸಚಿವ ಎಂದು ಕೇಂದ್ರ ಸರ್ಕಾರ ಪ್ರಮಾಣ ಪತ್ರ ನೀಡಿ ಗೌರವಿಸಲಾಯಿತು. ಪ್ರಸ್ತುತ ಸಿಎಂ ಡಿ.ಕೆ. ಶಿವಕುಮಾರ್ ಸರ್ಕಾರದ ಗೃಹ ಇಲಾಖೆ ಅಧಿಕಾರ ವಹಿಸಿಕೊಂಡು ಕಾನೂನು ಸುವ್ಯವಸ್ಥೆ ಕಾಪಾಡುವ ಕೆಲಸ ಮಾಡುತ್ತಾರೆ ಎಂದು ಧನ್ನಿ ತಿಳಿಸಿದರು.

ಮುಂಬರುವ ದಿನಗಳಲ್ಲಿ ರಾಜ್ಯದ ಪ್ರತಮ ಪ್ರಜೆಯಾಗಿ ನಾಡಿನ ಜನರ ಸೇವೆ ಮಾಡಲು ಅವಕಾಶ ಪಕ್ಷದ ಹೈಕಮಾಂಡ್ ಮತ್ತು ರಾಜ್ಯದ ಜನತೆ ನೀಡಲೆಂದು ಶುಭ ಹಾರೈಸುವೆ ಎಂದು ಕಮಲಾಕರ್ ಧನ್ನಿ ಹೇಳಿದರು.



**ಕಲಬುರಗಿ ; ನಗರಕ್ಕೆ ಆಗಮಿಸಿದ ಸಿಎಂ ಡಿ.ಕೆ ಶಿವಕುಮಾರ್ ಅವರನ್ನು ಕೆಕೆಆರ್ಟಿಸಿ ಅದ್ಯಕ್ಷ ಅರುಣಕುಮಾರ ಪಾಟೀಲ ಅವರು ಶ್ರೀ ದತ್ತಾತ್ರೇಯ ಮಹಾರಾಜರ ಫೋಟೋ ನೀಡುವ ಮೂಲಕ ಸನ್ಮಾನಿಸಿ ಸ್ವಾಗತ ಕೋರಿದರು. ಈ ಸಂದರ್ಭದಲ್ಲಿ ವೈದ್ಯಕೀಯ ಸಚಿವ ಡಾ.ಶರಣಪ್ರಕಾಶ ಪಾಟೀಲ ಶ್ರೀ ದತ್ತಾತ್ರೇಯ ದೇವಾಸ್ಥಾನ ಅರ್ಚಕರಾದ ಪ್ರಿಯಾಂಕ್ ಭಟ್ ಪೂಜಾರಿ ಸೇರಿದಂತೆ ಅನೇಕ ಮುಖಂಡರು ಹಾಜರಿದ್ದರು.**

# ತಿಂಗಳ 1 ಲಕ್ಷ ರೂ. ಸಂಬಳದ ಕೆಲಸಕ್ಕೆ ಬೈಬೈ: ತಾಲೂಕಿನಲ್ಲೇ ಪ್ರಥಮ ಬಾರಿಗೆ ಡ್ರ್ಯಾಗನ್ ಹಣ್ಣು ಬೆಳೆದು ಸೈ ಎನಿಸಿಕೊಂಡ ಯುವ ರೈತ ಮಹೇಂದ್ರ ರೆಡ್ಡಿ !

ಸೇಡಂ : ತಿಂಗಳ ಮೊದಲ ದಿನವೇ ಖಾತೆಗೆ ಜಮೆಯಾಗುತ್ತಿದ್ದ ಭರ್ಜರಿ 1 ಲಕ್ಷ ರೂಪಾಯಿ ಸಂಬಳದ ಕಾರ್ಪೊರೇಟ್ ಕೆಲಸ, ಕೊರೆಯುವ ಹವಾನಿಯಂತ್ರಿತ (ಎಸಿ) ಕೊಠಡಿಗಳು, ಸೇರಿದಂತೆ ಹಲವರು ರೀತಿಯ ಸೌಲಭ್ಯಗಳನ್ನು ತೊರೆದು ಯುವಕನೊಬ್ಬ ಮಣ್ಣಿನ ಕಾಯಕಕ್ಕೆ ಮರಳಿದ್ದಾನೆ. ಅಷ್ಟೇ ಅಲ್ಲ, ಸಾಂಪ್ರದಾಯಿಕ ಬೆಳೆಗಳ ಹಾದಿ ಬಿಟ್ಟು, ತಾಲೂಕಿನಲ್ಲೇ ಪ್ರಥಮ ಬಾರಿಗೆ ವಿನೂತನ ಡ್ರ್ಯಾಗನ್ ಹಣ್ಣಿನ ಕೃಷಿ ಮಾಡಿ ಇಂದು ಯಶಸ್ಸಿನ ಶಿಖರವೇರಿದ್ದಾರೆ , ನಮ್ಮ ತಾಲೂಕಿನ ಇಟಕಲ ಗ್ರಾಮದಲ್ಲಿರುವ ಯುವ ಕೃಷಿಕ ಮಹೇಂದ್ರ ದತ್ತಾತ್ರೇಯ ರೆಡ್ಡಿ,ಇವರ ಈ ಅಪರೂಪದ ಸಾಧನೆ ಇಂದಿನ ನಿರುದ್ಯೋಗಿ ಹಾಗೂ ಉದ್ಯೋಗದ ಜಂಜಾಟದಲ್ಲಿರುವ ಯುವ ಪೀಳಿಗೆಗೆ ಹೊಸ ದಾರಿದೀಪವಾಗಿದ್ದಾರೆ ಎಂದರೆ ತಪ್ಪಾಗಲಾರದು.ಪ್ರತಿಷ್ಠಿತ ಕಂಪನಿಯೊಂದರಲ್ಲಿ ಒಳ್ಳೆಯ ಹುದ್ದೆಯಲ್ಲಿದ್ದ ಮಹೇಂದ್ರ ರೆಡ್ಡಿ ಅವರಿಗೆ ಪ್ರತಿ ತಿಂಗಳು ಕೈತುಂಬಾ ಸಂಬಳ ಸಿಗುತ್ತಿತ್ತು. ಆದರೆ, ಹೆತ್ತ ನೆಲ ಮತ್ತು ಕೃಷಿಯ ಮೇಲಿನ ಒಲವು ಅವರನ್ನು ಸುಮ್ಮನಿರಗೊಡಲಿಲ್ಲ. ಹಳ್ಳಿಗಳಲ್ಲೇ ಇದ್ದುಕೊಂಡು ಕೃಷಿಯನ್ನು ಒಂದು ಲಾಭದಾಯಕ ಉದ್ಯಮವನ್ನಾಗಿ ಏಕೆ ಮಾಡಬಾರದು ಎಂಬ ಆಲೋಚನೆ ಅವರಲ್ಲಿ ಮೂಡಿತು. ಪರಿಣಾಮ, ಲಕ್ಷದ ಸಂಬಳದ ನೌಕರಿಗೆ ಸ್ವಇಚ್ಛೆಯಿಂದ ಬೈಬೈ ಹೇಳಿ 2021ರಲ್ಲಿ ತಮ್ಮ ಹಳ್ಳಿಯ ಜಮೀನಿಗೆ ಕಾಲಿಟ್ಟರು. ಮೊದಲ ಬಾರಿಗೆ 2021 ರಲ್ಲಿ ಒಂದು ಎಕರೆಯಲ್ಲಿ 2000 ಡ್ರ್ಯಾಗನ್ ಹಣ್ಣಿನ ಸಸಿ ನಾಟಿ ಮಾಡಿದರು.ಇದಕ್ಕೆ ಒಟ್ಟಾರೆಯಾಗಿ 7 ಲಕ್ಷ ಖರ್ಚಾಗಿತ್ತು ಎಂದು ಸಂದರ್ಶನದಲ್ಲಿ ಹೇಳುತ್ತಿದ್ದ ಅವರು ನಮ್ಮ ಭಾಗದ ಹವಾಮಾನ ಮತ್ತು ನೀರಿನ ಕೊರತೆಗೆ ಸೂಕ್ತವಾದ ಬೆಳೆಯನ್ನು ಹುಡುಕುತ್ತಿದ್ದ ರೆಡ್ಡಿಗೆ ಡ್ರ್ಯಾಗನ್ ಹಣ್ಣು ಉತ್ತಮ ಆಯ್ಕೆಯಾಗಿ ಕಂಡಿತು. ತಾಲೂಕಿನಲ್ಲಿ ಈ ಹಿಂದೆ ಯಾರೂ ಈ ವಿದೇಶಿ ಹಣ್ಣನ್ನು ಬೆಳೆಯುವ ಸಾಹಸ ಮಾಡಿರಲಿಲ್ಲ. ಆರಂಭದಲ್ಲಿ ಕೃಷಿ ತಜ್ಞರಿಂದ ಮತ್ತು ಅಂತರ್ಜಾಲದ ಮೂಲಕ ಮಾಹಿತಿ ಪಡೆದ ಇವರು, ಕಾಂಕ್ರೀಟ್ ಕಂಬಗಳನ್ನು ಅಳವಡಿಸಿ ಹನಿ ನೀರಾವರಿ ಪದ್ಧತಿಯ ಮೂಲಕ ಗಿಡಗಳನ್ನು ನಾಟಿ ಮಾಡಿದರು.ಕಠಿಣ ಪರಿಶ್ರಮ ಮತ್ತು ವೈಜ್ಞಾನಿಕ ನಿರ್ವಹಣೆಯಿಂದಾಗಿ ಇಂದು ಇಡೀ ತೋಟವೇ ಹಣ್ಣುಗಳಿಂದ ಕಂಗೊಳಿಸುತ್ತಿದೆ, 2021 ರಿಂದ 2026 ಇಲ್ಲಿವರೆಗೆ 12 ಲಕ್ಷಕ್ಕೂ ಹೆಚ್ಚು ಆದಾಯ ಬಂದಿರುವುದಾಗಿ ವಿವರಿಸಿದರು.

ಲಕ್ಷ ಸಂಬಳವಿರುವ ಖಾಸಗಿ ಕಂಪನಿಯಲ್ಲಿ ಉದ್ಯೋಗ ಬಿಟ್ಟು ಡ್ರ್ಯಾಗನ್ ಹಣ್ಣಿನ ಕೃಷಿಯಲ್ಲಿ ತೊಡಗಿ ವರ್ಷಕ್ಕೆ ಲಕ್ಷ ಲಕ್ಷ ಆದಾಯ ಗಳಿಸುತ್ತಿರುವುದು ಸಂತಸದ ವಿಷಯ ತಾಲೂಕಾ ಮತ್ತು ಜಿಲ್ಲೆಗೆ ಮಹೇಂದ್ರ ಮಾದರಿಯಾಗಿದ್ದಾರೆ.

## ಕೌಶಲ್ಯ ಮತ್ತು ಧೃಢಸಂಕಲ್ಪದಿಂದ ಯಶಸ್ಸು :ಶಿಫಾ ಜಮಾದಾರ



■ ಉದಯರಶ್ಮಿ ದಿನಪತ್ರಿಕೆ

ವಿಜಯಪುರ: ನಾವು ಆರೋಗ್ಯಕರ ಜೀವನವನ್ನು ನಡೆಸಲು ನಮ್ಮನ್ನು ಸದೃಢವಾಗಿ ಮತ್ತು ಸಕ್ರೀಯವಾಗಿಡಲು ನಾವು ಆರೋಗ್ಯಕರ ಆಹಾರ ಪದ್ದತಿಗಳನ್ನು ಅನುಸರಿಸಬೇಕು. ನಿಯಮಿತವಾಗಿ ದೈಹಿಕ ಕ್ರೀಡೆಗಳು ಅಥವಾ ಚಟುವಟಿಕೆಗಳಲ್ಲಿ ತೊಡಗಿಸಿಕೊಳ್ಳಬೇಕೆಂದು ಆರ್ಟ ಆಫ್ ಗೀವಿಂಗ್ ಫೌಂಡೇಶನದ ಯುವ ಸಂಚಾಲಕಿ ಶಿಫಾ ಜಮಾದಾರ ಅಭಿಪ್ರಾಯಪಟ್ಟರು.

ನಗರದ ಡಾ. ಬಿ.ಅರ್. ಅಂಬೇಡ್ಕರ ಜಿಲ್ಲಾ ವಾಲಿಬಾಲ ಕ್ರೀಡಾಂಗಣದಲ್ಲಿ ಆರ್ಟ ಆಫ್ ಗೀವಿಂಗ್ ಫೌಂಡೇಶನದ ವತಿಯಿಂದ 'ವಿಶ್ವ ವಾಲಿಬಾಲ ದಿನಾಚರಣೆ' ಉದ್ಘಾಟಿಸಿ ಮಾತನಾಡುತ್ತಾ, ವಾಲಿಬಾಲ ಕೇವಲ ದೈಹಿಕ ಶಕ್ತಿಯ ಕ್ರೀಡೆಯಲ್ಲ ಬದಲಾಗಿ ಆರ್ಟ ಆಫ್ ಗೀವಿಂಗ್‌ದ ನಿಜವಾದ ಸಾರವನ್ನು ಸಾಕಾರಗೊಳಿಸುವ ಆಟ, ಪ್ರತಿಯೊಬ್ಬ ಆಟಗಾರನು ನಿಸ್ವಾರ್ಥನಾಗಿರಬೇಕು. ತನ್ನ ಪ್ರಯತ್ನಗಳು ಕೌಶಲ್ಯ ಮತ್ತು ಧೃಢಸಂಕಲ್ಪವನ್ನು ವೈಯಕ್ತಿಕ ಲಾಭಕ್ಕಾಗಿ ಅಲ್ಲ, ಬದಲಾಗಿ ಇಡೀ ತಂಡದ ಗೆಲವಿಗಾಗಿ ಆರ್ಪಿಸಬೇಕು. ಪ್ರತಿಪಾಸ, ಪ್ರತಿ ಸೇವ್ ಮತ್ತು ಪ್ರತಿಯೊಂದು ಪಾಯಿಂಟ್ ನಂಬಿಕೆ, ಸಂಹನ, ಸಹಯೋಗ ಶಿಸ್ತು ಮತ್ತು ತನ್ನಿಗಿಂತ ಮೊದಲು ಇತರರ ಬಗ್ಗೆ ಯೋಚಿಸಬೇಕು. ಎಲ್ಲರೂ ಬೆಳೆದು ಒಟ್ಟಿಗೆ ಗೆದ್ದಾಗ ನಿಜವಾದ ಯಶಸ್ಸನ್ನು ಸಾದಿಸಲಾಗುತ್ತದೆ ಎಂದು ಆಟಗಾರರಿಗೆ ನೆನಪಿಸುವ ಮೂಲಕ ವಾಲಿಬಾಲ ಈ ಮೌಲ್ಯಗಳನ್ನು ಸುಂದರವಾಗಿ ಪ್ರದರ್ಶಿಸುತ್ತದೆ ಎಂದರು.

ಜಿಲ್ಲಾ ವಾಲಿಬಾಲ ತರಬೇತಿದಾರ ರಫಿಕ ನದಾಫ ಮಾತನಾಡಿ, ಶಾಲೆಗಳಲ್ಲಿ ಮಕ್ಕಳ ವಿವಿಧ ಆಟಗಳು ಮತ್ತು ಕ್ರೀಡೆಗಳಲ್ಲಿ ಭಾಗವಹಿಸಲು ದೈಹಿಕ ಶಿಕ್ಷಣ ಸಮಯಗಳಿಗೆ ಅವರಿಗೆ ಯಾವುದೇ ಕ್ರೀಡೆಯ ಬಗ್ಗೆ ಉತ್ಸಾಹವಿದ್ದರೆ ನಾವು ಅವರನ್ನು ಪ್ರೋತ್ಸಾಹಿಸಬೇಕು ಮತ್ತು ಬೆಂಬಲಿಸಬೇಕು ದೈಹಿಕ ಆರೋಗ್ಯಕ್ಕೆ ವಾಲಿಬಾಲ್ ಉತ್ತಮ ಕ್ರೀಡೆ ಎಂದರು.

ಸಮಾರಂಭದ ಅಧ್ಯಕ್ಷತೆಯನ್ನು ರಾಷ್ಟ್ರ ಪ್ರಶಸ್ತಿ ಪುರಸ್ಕೃತ ಡಾ.ಜಾವಿದ ಜಮಾದಾರ ವಹಿಸಿದ್ದರು.

ತರಬೇತಿದಾರರಾದ ಶಂಕರ ಲಡಂಗಿ, ಶರಣು ಕೂಳಶಟ್ಟಿ ವೇದಿಕೆಯಲ್ಲಿ ಉಪಸ್ಥಿತರಿದ್ದರು.

ವಾಲಿಬಾಲ ಕ್ರೀಡೆಗೆ ಹೆಚ್ಚಿನ ಉತ್ತೇನ ನೀಡಲು ಆರ್ಟ ಆಫ್ ಗೀವಿಂಗ್ ಫೌಂಡೇಶನದ ಪರವಾಗಿ ಆಟಗಾರರಿಗೆ ವಾಲಿಬಾಲ ಕಿಟ್‌ಗಳನ್ನು ವಿತ–ರಿಸಲಾಯಿತು.

## ಭ್ರೂಣಲಿಂಗ ಪತ್ತೆ: ನಿರ್ದಾಕ್ಷಿಣ್ಯ ಕ್ರಮಕ್ಕೆ ಡಿಸಿ ಡಾ.ಆನಂದ್ ಸೂಚನೆ

■ ಉದಯರಶ್ಮಿ ದಿನಪತ್ರಿಕೆ



ವಿಜಯಪುರ: ಜಿಲ್ಲೆಯು ಗಡಿ ಜಿಲ್ಲೆಯಾಗಿರುವುದರಿಂದ ಪ್ರಸವ ಪೂರ್ವ ಭ್ರೂಣ ಲಿಂಗ ಪತ್ತೆ ಹಾಗೂ ಹತ್ಯೆ ನಡೆಯದಂತೆ ಕಣ್ಗಾವಲು ಇರಿಸಲು ಈ ಕಾಯ್ದೆಯಡಿ ರಚಿತವಾದ ತಂಡ ನಿಯಮಿತವಾಗಿ ತಪಾಸಣೆ ಮತ್ತು ದಿಢೀರ ಕಾರ್ಯಾಚರಣೆಯನ್ನುಕೈಗೊಂಡು ಇಂತಹ ಪ್ರಕರಣ ಜಿಲ್ಲೆಯಲ್ಲಿ ನಡೆಯದಂತೆ ನೋಡಿಕೊಳ್ಳಬೇಕು. ಆಸ್ಪತ್ರೆ ಹಾಗೂ ಸ್ಕ್ಯಾನಿಂಗ್ ಕೇಂದ್ರಗಳ ಪರಿಶೀಲನೆ ಕೈಗೊಳ್ಳಬೇಕು ಎಂದು ಜಿಲ್ಲಾಧಿಕಾರಿಗಳಾದ ಡಾ. ಆನಂದ ಕೆ. ಅವರು ಅಧಿಕಾರಿಗಳಿಗೆ ಸೂಚಿಸಿದರು.

ಜಿಲ್ಲಾಧಿಕಾರಿ ಕಚೇರಿಯ ಸಭಾಂಗಣದಲ್ಲಿ ನಡೆದ ಕೆಪಿಎಂಇ ಜಿಲ್ಲಾ ನೋಂದಣಿ ಮತ್ತು ಕುಂದುಕೊರತೆ ನಿವಾರಣೆ ಪ್ರಾಧಿಕಾರದ ಸಭೆಯ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು. ಬಾಲ ಗರ್ಭಿಣಿಯರು ಕಂಡು ಬಂದರೆ ಅಂಥವರ ಮಾಹಿತಿಯನ್ನು ಸಹಾಯವಾಣಿ 1098 ಗೆ ಕರೆ ಮಾಡಲು ತಿಳಿಸಿ ಜಿಲ್ಲೆಯಲ್ಲಿ ಬಾಲ ಗರ್ಭಿಣಿಯರ ಪ್ರಕರಣಗಳು ಕಡಿಮೆ ಮಾಡುವ ನಿಟ್ಟಿನಲ್ಲಿ ಸಂಬಂಧಪಟ್ಟ ಇಲಾಖೆಗಳ ಸಮನ್ವಯದೊಂದಿಗೆ ಕಾರ್ಯಪ್ರವೃತವಾಗಿ ಕೆಲಸ ನಿರ್ವಹಿಸಬೇಕೆಂದು ಸೂಚಿಸಿದರು.

ವಿಜಯಪುರ ತಾಲೂಕಿನಲ್ಲಿ 742 ಖಾಸಗಿ ಆರೋಗ್ಯ ಸಂಸ್ಥೆಗಳು ಜಿಲ್ಲಾ ಕೆ.ಪಿ.ಎಂ.ಇ ಅಡಿಯಲ್ಲಿ ನೋಂದಣಿ ಆಗಿರುತ್ತದೆ. ಬ.ಬಾಗೇವಾಡಿ ತಾಲೂಕಿನಲ್ಲಿ 109, ಮುದ್ದೇಬಿಹಾಳ ತಾಲೂಕಿನಲ್ಲಿ 115, ಇಂಡಿ ತಾಲೂಕಿನಲ್ಲಿ 152. ಸಿಂದಗಿ ತಾಲೂಕಿನಲ್ಲಿ 157, ಒಟ್ಟು 1275 ಖಾಸಗಿ ಆಸ್ಪತ್ರೆಗಳು ನೋಂದಣಿ ಆಗಿರುತ್ತವೆ. ಜಿಲ್ಲೆಯಲ್ಲಿ ನೋಂದಣಿಗೊಂಡ ಪ್ರತಿಯೊಂದು ಖಾಸಗಿ ಆರೋಗ್ಯ ಸಂಸ್ಥೆಗಳು ಕಡ್ಡಾಯವಾಗಿ ನಿರ್ದಿಷ್ಟಪಡಿಸಿದ ವೈದ್ಯಕೀಯ ಚಿಕಿತ್ಸಾ ಪದ್ಧತಿ, ಸಂಸ್ಥೆಯ ಹೆಸರು, ಮಾಲಿಕರು, ನೋಂದಣಿ ಸಂಖ್ಯೆಗಳ ಬಣ್ಣದ ಫಲಕವನ್ನು ಪ್ರದರ್ಶಿಸುವಂತೆ ಸಭೆಯಲ್ಲಿ ಹಾಜರಿದ್ದ ತಾಲೂಕಾ ಆರೋಗ್ಯಾಧಿಕಾ–ರಿಗಳಿಗೆ ಸೂಚಿಸಿದರು.

ಇನ್ನು ಮುಂದೆ ಜಿಲ್ಲೆಯಲ್ಲಿ ನವೀಕರಣ–ಕ್ಕಾಗಿ ಅರ್ಜಿ ಸಲ್ಲಿಸುವ ಖಾಸಗಿ ಆರೋಗ್ಯ ಸಂಸ್ಥೆಗಳು ಕಡ್ಡಾಯವಾಗಿ ನಿರ್ದಿಷ್ಟಪಡಿಸಿದ ಬಣ್ಣದ ಫಲಕ ಅಳವಡಿಸಿದರೆ ಮಾತ್ರ ಕೆ.ಪಿ.ಎಂ.ಇ ಅಡಿ ಅನುಮೋದನೆ ನೀಡುವಂತೆ ಸಭೆಯಲ್ಲಿ ಪಾಲ್ಗೊಂಡಿದ್ದ ಅಧಿಕಾರಿಗಳಿಗೆ ಸೂಚಿಸಿದರು.

**ವಿಶೇಷ ತಂಡದ ಕಾರ್ಯಾಚರಣೆ ಚುರುಕುಗೊಳಿಸಿ ನಕಲಿ ವೈದ್ಯರ ವಿರುದ್ಧವೂ ಕ್ರಮಕ್ಕೆ ಜಿಲ್ಲಾಧಿಕಾರಿ ಸೂಚನೆ**

### ನಕಲಿ ವೈದ್ಯರ ವಿರುದ್ಧವೂ ಕ್ರಮಕ್ಕೆ ಸೂಚನೆ

ನಕಲಿ ವೈದ್ಯರ ವಿರುದ್ಧ ಕ್ರಮ ಜರುಗಿಸಲು ವಿಶೇಷ ಕಾರ್ಯಪಡೆ ತಂಡವು ಪ್ರತಿ ವಾರ ಒಂದು ತಾಲೂಕಿಗೆ ಅನಿರೀಕ್ಷಿತ ಭೇಟಿ ನೀಡಿ ನಕಲಿ ವೈದ್ಯರ ವಿರುದ್ಧ ನಿಯಮಾನುಸಾರ ಕ್ರಮ ಜರುಗಿಸಿ ವರದಿ ಸಲ್ಲಿಸಲು ಎಲ್ಲ ತಾಲೂಕಾ ಆರೋಗ್ಯಾಧಿಕಾರಿಗಳಿಗೆ ಜಿಲ್ಲಾಧಿಕಾರಿ ಅವರು ಕಟ್ಟುನಿಟ್ಟಾಗಿ ಸೂಚಿಸಿದರು.
ಜಿಲ್ಲೆಯಲ್ಲಿ ನಕಲಿ ವೈದ್ಯರ ಬಗ್ಗೆ ಖಚಿತ ಮಾಹಿತಿ ಇದ್ದಲ್ಲಿ ಸಾರ್ವಜನಿಕರು ನೇರವಾಗಿ ಸಂಬಂಧಪಟ್ಟ ತಾಲೂಕಾ ಆರೋಗ್ಯಾಧಿಕಾರಿಗಳಿಗೆ ವಿವರವಾದ ಮಾಹಿತಿ ನೀಡಲು ಮನವಿ ಮಾಡಿದರು.

ಕ್ರಿ.ಮಿ. ನಂ:554/2026

**ಮಾನ್ಯ ಪ್ರಥಮ ವರ್ಗ ನ್ಯಾಯಿಕ ದಂಡಾಧಿಕಾರಿಗಳು(ಕಿ.ಶ್ರೇ) ಮುದ್ದೇಬಿಹಾಳ ಇವರ ನ್ಯಾಯಾಲಯದಲ್ಲಿ**

1) ಸಿದ್ದವ್ವ ತಂ. ಸಂಗಪ್ಪ ಬಿರಾದಾರ ...ಅರ್ಜಿದಾರಳು

ವಿರುದ್ಧ

1) ಜನನ ವ, ಮರಣ ನೋಂದಣಾಧಿಕಾರಿಗಳು
ತಹಶೀಲ್ದಾರ ಕಾರ್ಯಾಲಯ, ಮುದ್ದೇಬಿಹಾಳ ...ಎದುರುದಾರ

**ವ್ಯವಹಾರ ಪ್ರಕ್ರಿಯಾ ಸಂಹಿತೆ ಆದೇಶ 5 ನಿಯಮ 20 (1) ರ ಅಡಿ ಜಾಹೀರ ಪ್ರಕಟಣೆ**

ಇದರಲ್ಲಿ ಯಾವತ್ತೂ ಸಾರ್ವಜನಿಕರಿಗೆ ಈ ಮೂಲಕ ತಿಳಿಯಪಡಿಸುವದೇನೆಂದರೆ,–

ಈ ಮೇಲ್ಕಾಣಿಸಿದ ಅರ್ಜಿಯಲ್ಲಿನ ಅರ್ಜಿದಾರಳ ಗಂಡ **ಸಂಗಪ್ಪ ತಂದೆ. ಬಸನಗೌಡ ಬಿರಾದಾರ** ಇವನು ದಿನಾಂಕ: **01–06–1997** ರಂದು ಮುದ್ದೇಬಿಹಾಳ ತಾಲೂಕಿನ **ಸರೂರ** ಗ್ರಾಮದಲ್ಲಿ ಮೃತಪಟ್ಟಿರುತ್ತಾನೆ. ಸದರಿ ಮೃತನಿಗೆ ಸಂಬಂಧಿಸಿದ ಸೂಕ್ತ ಮರಣ ದಾಖಲಾತಿ ಎದುರುದಾರರ ಕಾರ್ಯಾಲಯದಲ್ಲಿ ಲಭ್ಯವಿಲ್ಲದ ಕಾರಣ ಎದುರುದಾರರ ವಿರುದ್ಧ ಮೃತನ ಪ್ರಮಾಣ ಪತ್ರ ಪಡೆದುಕೊಳ್ಳಲು ಆದೇಶವಾಗುವಂತೆ ಮಾನ್ಯ ನ್ಯಾಯಾಲಯದಲ್ಲಿ ಅರ್ಜಿ ದಾಖಲಿಸಲಾಗಿದೆ. ಕಾರಣ ಯಾವತ್ತೂ ಸಾರ್ವಜನಿಕರಿಗೆ ಈ ಮೂಲಕ ತಿಳಿಸುವದೇನೆಂದರೆ,

ಮೇಲ್ಕಾಣಿಸಿದ ವಿಷಯಕ್ಕೆ ಸಂಬಂಧಿಸಿದಂತೆ ಯಾರಾದರೂ ಹಿತಾಸಕ್ತಿವುಳ್ಳವರು ಆ ಕುರಿತು ತಂಟೆ ತಕರಾರು ಸಲ್ಲಿಸುವವರು ಇದ್ದರೆ ದಿನಾಂಕ: **19/08/2026** ರಂದು ಸ್ವತಃ ಆಗಲಿ ಇಲ್ಲವೇ ತಮ್ಮಿಂದ ಅಧಿಕಾರ ಪಡೆದ ವಕೀಲರ ಮುಖಾಂತರವಾಗಲಿ ಮಾನ್ಯ ನ್ಯಾಯಾಲಯಕ್ಕೆ ಹಾಜರಾಗಿ ತಮ್ಮ ತಕರಾರು ವಗೈರೆ ಇದ್ದಲ್ಲಿ ಸಲ್ಲಿಸಬೇಕು. ಇದಕ್ಕೆ ತಪ್ಪಿದ್ದಲ್ಲಿ ತಮ್ಮ ಅನುಪಸ್ಥಿತಿಯಲ್ಲಿ ಮುಂದಿನ ಆದೇಶ ಮಾಡಲಾಗುವದು ಅಂತಾ ಕೊಟ್ಟ ಸಾರ್ವಜನಿಕ ನೊಟೀಸು.

ಈ ದಿನ ದಿನಾಂಕ: **08/07/2026** ರಂದು ನ್ಯಾಯಾಲಯದ ಮೊಹರಿನೊಂದಿಗೆ ನೀಡಲಾಗಿದೆ.

**ಸ್ಥಳ: ಮುದ್ದೇಬಿಹಾಳ**
**ದಿನಾಂಕ: 08–07–2026**

**ನ್ಯಾಯಾಲಯದ ಆದೇಶದ ಮೇರೆಗೆ**

ಸಹಿ/– **ಚೇತನ. ಮ. ಶಿವಶಿಂಪಿ** **ಅರ್ಜಿದಾರಳ ಪರ ವಕೀಲರು,**

ಸಹಿ/– **ಶಿರಸ್ತೇದಾರರು** **ಜೆ.ಎಂ.ಎಫ್.ಸಿ ನ್ಯಾಯಾಲಯ. ಮುದ್ದೇಬಿಹಾಳ**

## ಎಸ್‌ಐಆರ್: ತಹಶಿಲ್ದಾರ ಚವಲರ ಗ್ರಾಮಗಳಿಗೆ ಭೇಟಿ, ಪರಿಶೀಲನೆ

■ ಉದಯರಶ್ಮಿ ದಿನಪತ್ರಿಕೆ



ತಿಕೋಟಾ: ಚುನಾವಣಾ ಆಯೋಗದ ನಿರ್ದೇಶನದಂತೆ ನಡೆಯುತ್ತಿರುವ ಮತದಾರರ ಪಟ್ಟಿಯ ವಿಶೇಷ ಪರಿಷ್ಕರಣೆ (ಎಸ್‌ಐಆರ್) ಕಾರ್ಯದ ಅಂಗವಾಗಿ ತಹಶಿಲ್ದಾರ ಸುರೇಶ ಚವಲರ ತಾಲ್ಲೂಕಿನ ವಿವಿಧ ಗ್ರಾಮಗಳಿಗೆ ಭೇಟಿ ನೀಡಿ ಮತದಾರರಿಗೆ ಎನ್ಯುಮರೇಷನ್ ಫಾರಂ (ಇಎಫ್) ವಿತರಣೆ ಹಾಗೂ ಭರ್ತಿ ಮಾಡಿದ ಪಾರ್ಮಗಳ ಆನಲೈನ್ ಅಪಲೋಡ ಕಾರ್ಯವನ್ನು ಬುಧವಾರ ಖುದ್ದು ಭೇಟಿ ನೀಡಿ ಪರಿಶೀಲಿಸಿದರು.

ತಾಲ್ಲೂಕಿನ ಹುಬನೂರ ಗ್ರಾಮದ ಮತಗಟ್ಟೆ ಸಂಖ್ಯೆ 34, 35 ಹಾಗೂ ಕಳ್ಳಕವಟಗಿಯ ಮತಗಟ್ಟೆ ಸಂಖ್ಯೆ 49, 50 ರಲ್ಲಿ ಕಾರ್ಯನಿರ್ವಹಿಸುವ ಬಿಎಲ್‌ಒಗಳ ಕಾರ್ಯವೈಖರಿಯನ್ನು ಅವಲೋಕಿಸಿದ ತಹಶಿಲ್ದಾರ ಚವಲರ ಮತದಾರರಿಗೆ ನಮೂನೆಗಳನ್ನು ಸಮರ್ಪಕವಾಗಿ ತಲುಪಿಸಿ, ಅಗತ್ಯ ಮಾಹಿತಿಯನ್ನು ನೀಡುವಂತೆ ಸೂಚನೆ ನೀಡಿದರು.

ಯಾವುದೇ ಅರ್ಹ ಮತದಾರರು ವಂಚಿತರಾಗದಂತೆ ಜಾಗರೂಕತೆಯಿಂದ ಕಾರ್ಯನಿರ್ವಹಿಸುವಂತೆ ಮತಗಟ್ಟೆ ಅಧಿಕಾರಿಗಳಿಗೆ ನಿರ್ದೇಶನ ನೀಡಿದರು.

ಕಂದಾಯ ಇಲಾಖೆಯ ಎಲ್ಲ ಅಧಿಕಾರಿ ಹಾಗೂ ಸಿಬ್ಬಂದಿಗಳ ವ್ಯವಸ್ಥಿತ ತಂಡ ಮಾಡಿದ್ದು, ಎಸ್‌ಐಆರ್ ಪ್ರಗತಿಗೆ ಎಲ್ಲ ಸಿಬ್ಬಂದಿ ಹಗಲಿರುಳು ಶ್ರಮವಹಿಸುತ್ತಿದ್ದಾರೆ. ಮತದಾರರಿಗೆ ಅಗತ್ಯ ಮಾಹಿತಿಯೊಂದಿಗೆ ತಮ್ಮ ಕುಟುಂಬದ ಸದಸ್ಯರ ಸವಿವರಗಳನ್ನು ತುಂಬಲು ಜಾಗೃತಿ ಮೂಡಿಸಲಾಗಿದೆ.

ಬಿಎಲ್‌ಒಗಳಿಗೆ ಹಳ್ಳಿಗಳಲ್ಲಿ, ತೋಟದ ವಸ್ತಿ ಹಾಗೂ ಗಡಿಗ್ರಾಮಗಳಲ್ಲಿ ನೆಟ್ವರ್ಕ ಸಮಸ್ಯೆ ಎದುರಾದರೆ ಹತ್ತಿರದ ಗ್ರಾಮ ಪಂಚಾಯತಿ ಕಾರ್ಯಾಲಯದಲ್ಲಿ ಆನಲೈನ ಕಾರ್ಯ ನಿರ್ವಹಿಸಲು ವ್ಯವಸ್ಥೆ ಮಾಡಲಾಗಿದೆ. ಪ್ರತಿ ದಿನ ಎಸ್‌ಐಆರ್ ಪ್ರಗತಿ ಸಾಧಿಸುತ್ತಾ ಸಾಗಿದೆ ಎಂದು ತಹಶಿಲ್ದಾರ ಸುರೇಶ ಚವಲರ 'ಪ್ರಜಾವಾಣಿ' ಗೆ ಮಾಹಿತಿ ನೀಡಿದರು. ಈ ಸಂದರ್ಭದಲ್ಲಿ ಮೇಲ್ವಿಚಾರಕ ಕೆ.ಎಂ. ಗಳತಗಿ, ಬಿಎಲ್‌ಒ ಬಿ.ಆರ್.ಕಟೆ, ಪ್ರಕಾಶ ಚೌಧರಿ, ಅಶೋಕ ಚೌಧರಿ ಎಚ್.ಆರ್.ಕಲಾಲ, ಗ್ರಾಮ ಲೆಕ್ಕಾಧಿಕಾರಿ ಆರ್.ಎ. ಮುಲ್ಲಾ ಇದ್ದರು.

## ಎಸ್ ಐಆರ್ ಗೆ ರಾಜಕೀಯ ಪಕ್ಷಗಳು ಸಹಕರಿಸಬೇಕು

■ ಉದಯರಶ್ಮಿ ದಿನಪತ್ರಿಕೆ



ವಿಜಯಪುರ: ನೈಜ ಮತದಾರರು ಮತದಾರರ ಪಟ್ಟಿಯಿಂದ ಹೊರಗೆ ಉಳಿಯದಂತೆ ಮತ್ತು ಅನರ್ಹ ಮತದಾರರನ್ನು ಯಾವುದೇ ಕಾರಣಕ್ಕೂ ಮತದಾರರ ಪಟ್ಟಿಗೆ ಸೇರ್ಪಡೆಯಾಗದಂತೆ ಕ್ರಮ ವಹಿಸಲು ಎಲ್ಲ ರಾಜ–ಕೀಯ ಪಕ್ಷಗಳು ಹಾಗೂ ಮತದಾರರು ಸಹಕರಿಸಬೇಕು ಎಂದು ಮತದಾರರ ನೋಂದಣಾಧಿಕಾರಿಗಳು ಆಗಿರುವ ಮಹಾನಗರ ಪಾಲಿಕೆ ಆಯುಕ್ತರಾದ ವಿಜಯ ಮೆಕ್ಕಳಕಿ ಅವರು ಹೇಳಿದರು.

ಮಹಾನಗರ ಪಾಲಿಕೆ ಸಭಾಂಗಣದಲ್ಲಿ ಬುಧವಾರ ಮತದಾರರ ವಿಶೇಷ ಸಮಗ್ರ ಪರಿಷ್ಕರಣೆ ಕುರಿತು ನಗರದ ಎಲ್ಲ ರಾಜಕೀಯ ಪಕ್ಷಗಳ ಮುಖಂಡರ ಸಭೆಯ ಅಧ್ಯಕ್ಷತೆ ವಹಿಸಿ ಅವರು ನಗರದ ಎಲ್ಲ ರಾಜಕೀಯ ಪಕ್ಷಗಳ ಮುಖಂಡರ ಸಭೆಯಲ್ಲಿ ಅವರು ಮಾತನಾಡಿದರು.

ರಾಜಕೀಯ ಪಕ್ಷಗಳ ಪ್ರತಿನಿಧಿಗಳು ಹಾಗೂ ತಮ್ಮ ಪಕ್ಷಗಳಿಂದ ನೇಮಿಸಿಕೊಂಡ ಬಿಎಲ್ ಒ ಗಳನ್ನು ಈ ಪರಿಷ್ಕರಣೆ ಕಾರ್ಯದಲ್ಲಿ ಭಾಗವಹಿಸುವಂತೆ ನೋಡಿಕೊಳ್ಳಬೇಕು ಎಂದರು. ಭಾರತ ಚುನಾವಣಾ ಆಯೋಗದ ನಿರ್ದೇಶನದಂತೆ ಜೂ. 30 ರಿಂದ ಜು. 29ರವರೆಗೆ ಮತದಾರರ ಮನೆ ಮನೆಗೆ ತೆರಳಿ ಮತದಾರ ಗಣತಿ ನಮೂನೆಗಳನ್ನು ವಿತರಣೆ ಮಾಡಲಾಗುತ್ತಿದೆ. ಈ ಹಂತದಲ್ಲಿ ಆಯಾ ರಾಜಕೀಯ ಪಕ್ಷಗಳಿಂದ ನೇಮಿಸಿದ ಪ್ರತಿನಿಧಿಗಳು ಭಾಗವಹಿಸಬಹುದಾಗಿದೆ ಎಂದರು.

ಭಾರತದ ಚುನಾವಣಾ ಆಯೋಗದ ನಿರ್ದೇಶನದಂತೆ ಜೂ. 30ರಿಂದ ಜು. 29ರವರೆಗೆ ಮತದಾರರ ಮನೆ ಮನೆಗೆ ತೆರಳಿ ಮತದಾರರ ಗಣತಿ ನಮೂನೆಗಳನ್ನು ವಿತರಣೆ ಮಾಡುತ್ತಿದ್ದು, ಸಾರ್ವಜನಿಕ ಹಾಗೂ ರಾಜಕೀಯ ಪಕ್ಷಗಳ ಪ್ರತಿನಿಧಿಗಳು ಹಾಗೂ ತಮ್ಮ ಪಕ್ಷಗಳಿಂದ ನೇಮಿಸಿಕೊಂಡ ಬಿಎಲ್ ಎಗಳು ಈ ಕಾರ್ಯದಲ್ಲಿ ಭಾಗವಹಿಸುವಂತೆ ಮನವಿ ಮಾಡಿದರು.

**ಮತದಾರರ ನೋಂದಣಾಧಿಕಾರಿ ಹಾಗೂ ಮಹಾನಗರ ಪಾಲಿಕೆ ಆಯುಕ್ತ ವಿಜಯ ಮೆಕ್ಕಳಕಿ ಮನವಿ**

ಇಲ್ಲಿಯವರೆಗೆ 1,84,034 ಮತದಾರರ ಗಣತಿ ನಮೂನೆ ವಿತರಿಸಲಾಗಿದ್ದು, ಅದರಲ್ಲಿ 21,812 ಗಣತಿ ನಮೂನೆಗಳು ಡಿಜಿಟೈಸ್ ಮಾಡಲಾಗಿರುತ್ತದೆ, ಆನಲೈನ್‌ನಲ್ಲಿ ಮತದಾರರು ಸಲ್ಲಿಸಿದ ಒಟ್ಟು ಗಣತಿ ನಮೂನೆಗಳು 740, ಸಂಗ್ರಹಿಸಲಾಗದ/ಗೈರುಹಾಜರಾದ ಮತದಾರರು 3, ಶಾಶ್ವತವಾಗಿ ಸ್ಥಳಾಂತರಿಗೊಂಡ ಮತದಾರರು 88, ಮರಣ ಹೊಂದಿರುವ ಮತದಾರರು 216 ಬಗ್ಗೆ ಮಾಹಿತಿ ನೀಡಲಾಯಿತು. ಮತದಾರರಿಗೆ ಗಣತಿ ನಮೂನೆಗಳನ್ನು ಭರ್ತಿಮಾಡಲು ಸಹಾಯಮಾಡಲು ಮತದಾರರ ಅನುಕೂಲಕ್ಕಾಗಿ ಪ್ರತಿ ವಾರ್ಡ್ನಲ್ಲಿ ಈಗಾಗಲೇ ಮತದಾರರ ಸಹಾಯ ಕೇಂದ್ರ ಸ್ಥಾಪಿಸಲಾಗಿದ್ದು, ಅದರ ಸದುಪಯೋಗ ಪಡೆದುಕೊಳ್ಳಬೇಕು ಎಂದು ಮತದಾರ–ರಿಗೆ ಮನವಿ ಮಾಡಿದರು.

ಮತದಾರರ ಪಟ್ಟಿಯ ವಿಶೇಷ ಸಮಗ್ರ ಪರಿಷ್ಕರಣೆ ಕಾರ್ಯದ ಕುರಿತು ಸಾರ್ವಜನಿಕರಿಗೆ ಮಹಾನಗರ ಪಾಲಿಕೆಯ ಘನತ್ಯಾಜ್ಯ ವಾಹನಗಳಲ್ಲಿ ಧ್ವನಿ ವರ್ಧಕದ ಮೂಲಕ ಪ್ರಚಾರ ಮಾಡಲಾಗುತ್ತಿದೆ. ಸಾರ್ವಜನಿಕರ ಅನುಕೂಲಕ್ಕಾಗಿ ಮತದಾರರ ಸಹಾಯ ವಾಣಿ: 08352–200225 ಸ್ಥಾಪಿಸಲಾಗಿದೆ ಎಂದರು.

ವಿಜಯಪುರ ನಗರ ಮತಕ್ಷೇತ್ರ ಸಂಬಂಧಿಸಿದಂತೆ ಮತದಾರರ ವಿಶೇಷ ಸಮಗ್ರ ಪರಿಷ್ಕರಣೆ ಚುನಾವಣಾ ಆಯೋಗದ ಎಲ್ಲಾ ಹಂತಗಳ ಅಧಿಕಾರಿಗಳು ಹಾಗೂ ಸಿಬ್ಬಂದಿಗಳನ್ನು ಒಳಗೊಂಡಿರುವ ಪಾರದರ್ಶಕ ಪ್ರಕ್ರಿಯೆಯಾಗಿದೆ. ಯಾವುದೇ ಕಾರಣಕ್ಕೆ ಮತದಾರರ ಪಟ್ಟಿಯಿಂದ ನೈಜ ಮತದಾರರು ಹೊರಗುಳಿಯದಂತೆ ಹಾಗೂ ಅನರ್ಹ ಮತದಾರರು ಪಟ್ಟಿಯಲ್ಲಿ ಸೇರ್ಪಡೆಯಾಗದಂತೆ ನೋಡಿಕೊಳ್ಳಬೇಕು ಎಂದು ರಾಜಕೀಯ ಪಕ್ಷದ ಮುಖಂಡರು ಹಾಗೂ ಮತದಾರರಿಗೆ ಮನವಿ ಮಾಡಿದರು.

ಸಭೆಯಲ್ಲಿ ವಿವಿಧ ಪಕ್ಷಗಳ ರಾಜಕೀಯ ಪ್ರತಿನಿಧಿಗಳು ಉಪಸ್ಥಿತರಿದ್ದರು.

## ಮಣಂಕಲಗಿ– ಅರ್ಜನಾಳ ಸಂಪರ್ಕ ರಸ್ತೆ ತೆರವಿಗೆ ಗ್ರಾಮಸ್ಥರ ಮನವಿ

■ ಉದಯರಶ್ಮಿ ದಿನಪತ್ರಿಕೆ



ಚಡಚಣ: ತಾಲೂಕಿನ ಮಣಂಕಲಗಿ ಗ್ರಾಮದಿಂದ ಅರ್ಜನಾಳ ಗ್ರಾಮಕ್ಕೆ ಸಂಪರ್ಕ ಕಲ್ಪಿಸುವ ಪ್ರಮುಖ ಸಾರ್ವಜನಿಕ ರಸ್ತೆಯನ್ನು ಪಕ್ಕದ ಜಮೀನಿನ ಮಾಲೀಕರೊಬ್ಬರು ಬಂದ್ ಮಾಡಿರುವುದರಿಂದ ರೈತರು, ಶಾಲಾ ವಿದ್ಯಾರ್ಥಿಗಳು ಹಾಗೂ ಸಾರ್ವಜನಿಕರು ತೀವ್ರ ತೊಂದರೆ ಅನುಭವಿಸುತ್ತಿದ್ದಾರೆ. ಸಮಸ್ಯೆಯನ್ನು ತಕ್ಷಣ ಬಗೆಹರಿಸಿ ರಸ್ತೆ ಸಂಚಾರಕ್ಕೆ ಮುಕ್ತಗೊಳಿಸುವಂತೆ ಆಗ್ರಹಿಸಿ ಗ್ರಾಮಸ್ಥರು ಮಂಗಳವಾರ ಚಡಚಣ ತಹಶೀಲ್ದಾರರಿಗೆ ಮನವಿ ಪತ್ರ ಸಲ್ಲಿಸಿದರು.

ಗ್ರಾಮಗಳ ನಡುವಿನ ಪ್ರಮುಖ ಸಂಪರ್ಕ ರಸ್ತೆಯಾಗಿರುವ ಈ ಮಾರ್ಗ ಬಂದ್ ಆಗಿರುವ ಪರಿಣಾಮ ರೈತರು ತಮ್ಮ ಜಮೀನುಗಳಿಗೆ ಕೃಷಿ ಕಾರ್ಯಗಳಿಗಾಗಿ ತೆರಳಲು ಪರದಾಡುವಂತಾಗಿದೆ. ಅಲ್ಲದೆ ಪ್ರತಿದಿನ ಇದೇ ರಸ್ತೆಯನ್ನು ಬಳಸಿಕೊಂಡು ಶಾಲೆಗೆ ತೆರಳುವ ವಿದ್ಯಾರ್ಥಿಗಳು ಪರ್ಯಾಯ ಮಾರ್ಗ ಬಳಸಬೇಕಾದ ಪರಿಸ್ಥಿತಿ ನಿರ್ಮಾಣವಾಗಿದ್ದು, ಸಮಯ ಮತ್ತು ಶ್ರಮ ಎರಡೂ ವ್ಯರ್ಥವಾಗುತ್ತಿದೆ ಎಂದು ಗ್ರಾಮಸ್ಥರು ದೂ–ರಿದರು.

ಮಳೆಗಾಲ ಆರಂಭವಾಗಿರುವ ಹಿನ್ನೆಲೆಯಲ್ಲಿ ಕೃಷಿ ಚಟುವಟಿಕೆಗಳು ವೇಗ ಪಡೆದುಕೊಂಡಿರುವ ಈ ಸಂದರ್ಭದಲ್ಲಿ ರಸ್ತೆ ಬಂದ್ ಆಗಿರುವುದು ರೈತರಿಗೆ ಮತ್ತಷ್ಟು ಸಂಕಷ್ಟ ಉಂಟುಮಾಡಿದೆ. ಕೃಷಿ ಯಂತ್ರೋಪಕರಣಗಳು, ಬಿತ್ತನೆ ಸಾಮಗ್ರಿ ಹಾಗೂ ಇತರ ಅಗತ್ಯ ವಸ್ತುಗಳನ್ನು ಸಾಗಿಸಲು ತೊಂದರೆಯಾಗುತ್ತಿದ್ದು, ರಸ್ತೆ ಮುಚ್ಚಿರುವುದ–ರಿಂದ ಗ್ರಾಮಸ್ಥರ ದೈನಂದಿನ ಜೀವನದ ಮೇಲೆಯೂ ಪ್ರತಿಕೂಲ ಪರಿಣಾಮ ಬೀರುತ್ತಿದೆ ಎಂದು ತಿಳಿದುಬಂದಿದೆ.

ಮಣಂಕಲಗಿಯಿಂದ ಅರ್ಜನಾಳಕ್ಕೆ ಸಂಪರ್ಕ ಕಲ್ಪಿಸುವರಸ್ತೆಯನ್ನುಸಾರ್ವಜನಿಕರುಹಲವುವರ್ಷಗಳಿಂದ ಬಳಸಿಕೊಂಡು ಬರುತ್ತಿದ್ದಾರೆ. ಧಿಡಿರ್ ರಸ್ತೆ ಬಂದ್ ಆಗಿರುವುದರಿಂದ ವಿದ್ಯಾರ್ಥಿಗಳ ಶಿಕ್ಷಣ ಹಾಗೂ ರೈತರ ಕೃಷಿ ಚಟುವಟಿಕೆಗಳಿಗೆ ಗಂಭೀರ ಅಡಚಣೆ ಉಂಟಾಗಿದೆ. ಸಂಬಂಧಪಟ್ಟ ಅಧಿಕಾರಿಗಳು ತಕ್ಷಣ ಸ್ಥಳ ಪರಿಶೀಲನೆ ನಡೆಸಿ, ಸಮಸ್ಯೆಯನ್ನು ಶಾಶ್ವತವಾಗಿ ಬಗೆಹರಿಸಬೇಕು. ಸಾರ್ವಜನಿಕರ ಸಂಚಾರಕ್ಕೆ ರಸ್ತೆ ಮುಕ್ತಗೊಳಿಸಲು ಅಗತ್ಯ ಕ್ರಮ ಕೈಗೊಳ್ಳಬೇಕು ಎಂದು ಗ್ರಾಮಸ್ಥರು ಆಗ್ರಹಿಸಿದರು.

ತಹಶೀಲ್ದಾರರ ಪರವಾಗಿ ಮನವಿ ಸ್ವೀಕರಿಸಿ, ಸಂಬಂಧಿಸಿದ ಅಧಿಕಾರಿಗಳ ಮೂಲಕ ಸ್ಥಳ ಪರಿಶೀಲನೆ ನಡೆಸಿ ನಿಯಮಾನುಸಾರ ಅಗತ್ಯ ಕ್ರಮ ಕೈಗೊಳ್ಳುವುದಾಗಿ ಭರವಸೆ ನೀಡಿದರು.

ಈ ಸಂದರ್ಭದಲ್ಲಿ ವಿನಾಯಕ ಮಠಪತಿ, ಸಿದ್ದಾರಾಮ ಹೆಗಳೋಡಿ, ಅಶೋಕ ಜತ್ತಿ, ಸಿದ್ದರಾಮ ಮೇತ್ರಿ, ಪಂಡಿತ ಮೇತ್ರಿ, ಹಸನ ವಾಲಿಕಾರ, ದುಂಡಪ್ಪ ಜತ್ತಿ, ಶ್ರೀಶೈಲ ಮಠ, ಬಸವರಾಜ ಮೇತ್ರಿ ಸೇರಿದಂತೆ ಅನೇಕ ರೈತರು ಹಾಗೂ ಗ್ರಾಮಸ್ಥರು ಉಪಸ್ಥಿತರಿದ್ದರು.

## ಸರ್ವಜ್ಞ ವಿದ್ಯಾಪೀಠದಲ್ಲಿ ವಿದ್ಯಾರ್ಥಿಗಳಿಗೆ ಎಚ್‌ಪಿವಿ ಲಸಿಕೆ

■ ಉದಯರಶ್ಮಿ ದಿನಪತ್ರಿಕೆ



ತಾಳಿಕೋಟೆ: ಪಟ್ಟಣದ ಸರ್ವಜ್ಞ ವಿದ್ಯಾಪೀಠ ಶಿಕ್ಷಣ ಸಂಸ್ಥೆಯಲ್ಲಿಯ ಹದಿನಾಲ್ಕು ವರ್ಷದ ವಿದ್ಯಾರ್ಥಿನಿಯರಿಗೆ ಸರ್ಕಾರಿ ಮಾರ್ಗಸೂಚಿಗಳ ಪ್ರಕಾರ ಎಚ್‌ಪಿವಿ (ಹ್ಯೂಮನ್ ಪ್ಯಾಪಿ ಲೋನ್ ವೈರಸ್) ಲಸಿಕೆ ನೀಡಲಾಯಿತು. ಇದು ಗರ್ಭಕಂಟಕದ ಕ್ಯಾನ್ಸರ್ ತಡೆಗಟ್ಟಲು ಸುರಕ್ಷಿತ ಮತ್ತು ಪರಿಣಾಮಕಾರಿ ಲಸಿಕೆಯಾಗಿದೆ. ಅದಕ್ಕಾಗಿ 14 ವರ್ಷ ಮೇಲ್ಪಟ್ಟು 15 ವರ್ಷದ ಒಳಗಿನ ವಿದ್ಯಾರ್ಥಿನಿಯರಿಗೆ ಹಾಕಿಸಲಾಯಿತು.

ಪ್ರಾಥಮಿಕ ಆರೋಗ್ಯ ಕೇಂದ್ರದ ಮಧು ಟಕ್ಕಳಕಿ, ಪ್ರಾಥಮಿಕ ಆರೋಗ್ಯ ಸುರಕ್ಷಿತ ಅಧಿಕಾರಿ ನೂರ್ ಜಾನ್ ಬೋರಗಿ, ಪ್ರಾಥ–ಮಿಕ ಆರೋಗ್ಯ ಸುರಕ್ಷಾಧಿಕಾರಿ ವಿದ್ಯಾವತಿ ಬೂದಿಹಾಳ, ಆಶಾ ಕಾರ್ಯಕರ್ತೆಯರು, ಮತ್ತು ಶಿಕ್ಷಣ ಸಂಸ್ಥೆಯ ಸಂಸ್ಥಾಪಕ ಅಧ್ಯಕ್ಷರಾದ ಸಿದ್ದನಗೌಡ ಬ.ಮಂಗಳೂರ, ಮುಖ್ಯಗುರುಗಳಾದ ಸಂತೋಷ ಪವಾರ, ಶಾಂತಗೌಡ ಬಿರಾದಾರ, ಚೇತನ ನಾವದಗಿ, ಮತ್ತು ವಿದ್ಯಾರ್ಥಿನಿಯರು ಇದ್ದರು.

**Printed by:** AVINASH BIDARI, **Published and owned by:** SHAILA INDUSHEKHAR MANUR **Printed at:** ARUN OFFSET PRINTERS,No.23, Sanjaygandhi Nagar, Indi Road, Vijayapura - 586101, Vijayapura Dist., Karnataka. **Published at:** At No.14, Silk City, Near Varasiddi Vinayaka Temple, Atalatti Link Road, Vijayapura -586102, Vijayapura Dist., Karnataka..**Editor :** INDUSHEKHAR MANUR